# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 83 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 07–10–2023 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 83 | Title- Code: KARKAN 28269 | Chitradurga | Date: 07-10-2023 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕೃಷಿ ಹಾಗೂ ತೋಟಗಾರಿಕೆ ವಿಶ್ವ ವಿದ್ಯಾಲಯಗಳು ಸಂಶೋಧನೆ ಹೆಚ್ಚಿನ ಒತ್ತು ನೀಡಲಿ: ಸಿಎಂ 2

ಇಂದು ಚಿತ್ರದುರ್ಗ ಜಿಲ್ಲೆಗೆ ಕೇಂದ್ರ ಬರ ಅಧ್ಯಯನ ತಂಡ ಭೇಟಿ 3

ಕಬಡ್ಡಿ: ಭಾರತ ವಿರುದ್ಧ ಪಾಕ್‌ಗೆ ಹೀನಾಯ ಸೋಲು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕ್ರಿಮಿನಲ್, ಲೋಕಾಯುಕ್ತ ಪ್ರಕರಣ ಎದುರಿಸುತ್ತಿರೋ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಬಿಗ್ ಶಾಕ್: ಹಿಂಬಡ್ತಿ

» **ಬೆಂಗಳೂರು**

ಶಿಕ್ಷಣ ಇಲಾಖಾ ವಿಚಾರಣೆ, ಲೋಕಾಯುಕ್ತ ಮತ್ತು ಕ್ರಿಮಿನಲ್ ಮೊಕದ್ದಮ್ಮೆಗಳನ್ನು ಎದುರಿಸುತ್ತಿರೋ ಗ್ರೂಪ್–ಎಕಿರಿಯಶ್ರೇಣಿಯ23ಶಿಕ್ಷಣಾಧಿಕಾರಿಗಳಿಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಿಂಬಡ್ತಿ ನೀಡಿ, ಬಿಗ್ ಶಾಕ್ ನೀಡಿದೆ.ಶಾಲಾ ಶಿಕ್ಷಣ ಇಲಾಖೆಯಿಂದ ಆದೇಶ ಹೊರಡಿಸಿದ್ದು ಗ್ರೂಪ್–ಬಿ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳನ್ನು ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ನಾಗರೀಕ ಸೇವಾ ನಿಯಮದಡಿ ಗ್ರೂಪ್–ಎ ಕಿರಿಯ ಶ್ರೇಣಿ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದಲ್ಲಿ ಸ್ವತಂತ್ರ ಪ್ರಭಾರಿಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಪ್ರಸ್ತುತ ಈ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ, ಕ್ರಿಮಿನಲ್ ಮೊಕದ್ದಮ್ಮೆಗಳು ಬಾಕಿ ಇರುವುದರಿಂದ ತಕ್ಷಣದಿಂದ ಜಾರಿಗೆ ಬರುವಂತೆ ಬಿಡುಗಡೆಗೊಳಿಸಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಆದೇಶಿಸಿದೆ.

ಇನ್ನೂ ಈ ಪ್ರಕರಣಗಳಲ್ಲಿ ಇಲಾಖೆ ನೋಟಿಸ್ಸಿಗೆ ಉತ್ತರ ನೀಡದ ಕೆಲವು ಅಧಿಕಾರಿಗಳಿದ್ದರೇ, ಉಳಿದವು ಕ್ರಿಮಿನಲ್ ಮೊಕದ್ದಮ್ಮೆ ಮತ್ತು ಲೋಕಾಯುಕ್ತ ವಿಚಾರಣೆಗಳಾಗಿವೆ. ಈ ಹಿನ್ನಲೆಯಲ್ಲಿ ಈ ಅಧಿಕಾರಿಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಿ ಆದೇಶಿಸಲಾಗಿದೆ. ಅಲ್ಲದೇ ಮುಂದಿನ ಸ್ಥಳ ನಿಯುಕ್ತಿಗಾಗಿ ಶಿಕ್ಷಣ ಇಲಾಖೆ ಆಯುಕ್ತರನ್ನು ಭೇಟಿಯಾಗಿ ವರದಿ ಮಾಡಿಕೊಳ್ಳುವಂತೆ ತಿಳಿಸಿದೆ.

### ಬಿಜೆಪಿ ಸಮಾಜ ಒಡೆಯುವ ಕೆಲಸ ಮಾಡುತ್ತಿದ್ದರೆ, ಕಾಂಗ್ರೆಸ್ ಜೋಡಿಸುತ್ತಿದೆ: ಡಿಸಿಎಂ ಶಿವಕುಮಾರ್

» **ಬೆಂಗಳೂರು**



ಬಿಜೆಪಿ ಸಮಾಜ ಒಡೆಯುವ ಕೆಲಸ ಮಾಡುತ್ತಿದ್ದರೆ, ಕಾಂಗ್ರೆಸ್ ಅದನ್ನು ಜೋಡಿಸುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ. ಶಿವಮೊಗ್ಗದಲ್ಲಿ ಹಿಂದೂಗಳನ್ನು ಗುರಿಯಾಗಿ ಸಿಕೊಂಡು ದಾಳಿ ಮಾಡಿ ಭಯದ ವಾತಾವರಣ ಉಂಟು ಮಾಡಲಾಗಿದೆ ಎನ್ನುವ ಬಿಜೆಪಿ ಆರೋಪ ಕುರಿತು ಪ್ರತಿಕ್ರಿಯಿಸಿದ ಡಿಸಿಎಂ, ಕಬ್ಬಿಣದಿಂದ ಸೂಜಿ ಮತ್ತು ಕತ್ತರಿ ತಯಾರಿಸಬಹುದು. ಕಾಂಗ್ರೆಸ್ ಸೂಜಿಯಿಂದ ಹೊಲಿಯುವಕೆಲಸಮಾಡುತ್ತಿದ್ದರೆ,ಬಿಜೆಪಿಯವರು ಕತ್ತರಿಯಿಂದ ಕತ್ತರಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಟೀಕಿಸಿದರು.

ಪುಟ ↘ 3

# ಸಂತ್ರಸ್ಥ ಕುಟುಂಬಗಳ ಸದಸ್ಯರಿಗೆ ಉದ್ಯೋಗ, ಮನೆ ನಿರ್ಮಾಣ: ಸಿಎಂ ಸಿದ್ದರಾಮಯ್ಯ ಭರವಸೆ

» **ಚಿತ್ರದುರ್ಗ**

ಕಲುಷಿತ ನೀರು ಕುಡಿದು ಆರು ಮಂದಿ ಮೃತ ಪಟ್ಟಿದ್ದ ಕಾವಾಡಿಗರ ಹಟ್ಟಿಯ ಅಭಿವೃದ್ಧಿಗೆ 3 ಎಕರೆ ಜಾಗ 4 ಕೋಟಿ ರೂಪಾಯಿ ನೀಡಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು. ಕಲುಷಿತ ನೀರು ಕುಡಿದು ಆರು ಮಂದಿ ಮೃತಪಟ್ಟಿದ್ದ ಕಾವಾಡಿಗರಹಟ್ಟಿಯಲ್ಲಿ ಸಂತ್ರಸ್ಥ ಕುಟುಂಬಗಳ ಬಂಧುಗಳನ್ನು ಮಾತಾಡಿಸಿದ ಬಳಿಕ ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿ ಈ ಭರವಸೆ ನೀಡಿದರು. ಸಂತ್ರಸ್ಥ ಕುಟುಂಬಗಳ ಜವಾಬ್ದಾರಿ ಸರ್ಕಾರ ವಹಿಸಿಕೊಳ್ಳಲಿದೆ. ಈ ಕುಟುಂಬಗಳ ಸದಸ್ಯರಿಗೆ ಉದ್ಯೋಗವನ್ನೂ ಕೊಡುತ್ತೇವೆ.ಮನೆಯನ್ನೂಕಟ್ಟಿಸಿಕೊಡುತ್ತೇವೆ ಎಂದರು.

ಶುದ್ದ ಕುಡಿಯುವ ನೀರು ಕೊಡುವುದು ನಮ್ಮ ಕರ್ತವ್ಯ. ಘಟನೆ ಘಟಿಸಿದ ತಕ್ಷಣ ಸ್ಥಳೀಯ ಶಾಸಕರು, ಜಿಲ್ಲಾ ಮಂತ್ರಿಗಳು ಮತ್ತು ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದೆ. ತಕ್ಷಣಕ್ಕೆ 10 ಲಕ್ಷ ಪರಿಹಾರ ನೀಡಿದೆವು ಎಂದು ವಿವರಿಸಿದರು. ಮೊದಲೇ ಶುದ್ದ ನೀರಿನ ವ್ಯವಸ್ಥೆ ಇದ್ದಿದ್ದರೆ ಈ ಅನಾಹುತ ನಡೆಯುತ್ತಿರಲಿಲ್ಲ. ಘಟನೆ ಬಳಿಕ ಶುದ್ಧ ಕುಡಿಯುವ ನೀರಿಗೆ ತೊಂದರೆ ಆಗದಂತೆ ಅಗತ್ಯ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮುಂದೆ ಇಂತಹ ಅನಾಹುತ ನಡೆದರೆ ಸಂಬಂಧ ಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವುದು ಖಚಿತ ಎಂದು ಎಚ್ಚರಿಸಿದರು. 123 ವರ್ಷಗಳಲ್ಲೇ ಅತ್ಯಂತ ಕಡಿಮೆ ಮಳೆ ಆಗಿದೆ. ಬರ ಪೀಡಿತ ಜಿಲ್ಲೆಗಳ ಸಂಖ್ಯೆ ಹೆಚ್ಚುತ್ತಿದೆ. 42 ಲಕ್ಷ ಹೆಕ್ಟೇರ್ ಪ್ರದೇಶದ ಬೆಳೆ ಹಾನಿಯಾಗಿದೆ. 30 ಸಾವಿರ ಕೋಟಿಯಷ್ಟು ನಷ್ಟ ಆಗಿದೆ. ನಾವು ಓಆಖಈ ಅಡಿಯಲ್ಲಿ ಕೇಂದ್ರಕ್ಕೆ ಪರಿಹಾರ ಕೇಳಿದ್ದೇವೆ. ಸದ್ಯ ಕೇಂದ್ರ ಅಧ್ಯಯನ ತಂಡ ರಾಜ್ಯಕ್ಕೆ ಬಂದಿದ್ದು ನಾಳೆ ಚಿತ್ರದುರ್ಗಕ್ಕೂ ಬರಲಿದೆ ಎಂದು ವಿವರಿಸಿದರು. ಇಂದು ಇಡೀ ದೇಶದಲ್ಲಿ ಬರಗಾಲದ ಸ್ಥಿತಿ ಇದೆ. ರಾಜ್ಯದಲ್ಲೂ ಬರ ಇದ್ದು ಕುಡಿಯುವ ನೀರು, ರಾಸುಗಳಿಗೆ ಮೇವು– ನೀರು ತೊಂದರೆ ಆಗದಂತೆ ವ್ಯವಸ್ಥೆ ಮಾಡಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಉದ್ಯೋಗ ಸೃಷ್ಟಿ ಮಾಡಬೇಕು. ಕೆಲಸಕ್ಕಾಗಿ ವಲಸೆ ಹೋಗುವ ಸ್ಥಿತಿ ಬರದಂತೆ ನೋಡಿಕೊಳ್ಳಲು ಎಚ್ಚರಿಸಿದ್ದೇನೆ ಎಂದರು. ನಮ್ಮ ಸರ್ಕಾರ ಬಡವರ, ಮಧ್ಯಮ ವರ್ಗದವರ ಸಂಕಷ್ಟ ಬಗೆಹರಿಸುವ ಸಲುವಾಗಿ 5 ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ ಎಂದರು. ಇದೇ ಸಂದರ್ಭದಲ್ಲಿ ಕಲುಷಿತ ನೀರು ಕುಡಿದು 6 ಮಂದಿ ಮೃತಪಟ್ಟ ಕಾವಾಡಿಗರ ಹಟ್ಟಿಯಲ್ಲಿ ಸಿದ್ದರಾಮಯ್ಯ ಅವರು ಸಂತ್ರಸ್ಥ ಕುಟುಂಬಗಳ ಸಾಕವ್ವ, ವಿಜಯಮ್ಮ, ರಾಜಪ್ಪ, ವಸಂತ, ಜಿ.ಬಿ.ರಾಜಾಶೇಖರ ಮತ್ತು ಹಟ್ಟಿಯ ಇತರೆ ನಿವಾಸಿಗಳನ್ನು ಮಾತಾಡಿಸಿ ಸಮಸ್ಯೆ ಆಲಿಸಿದರು.





## 4860 ಕೋಟಿ ರೂ. ಬೆಳೆ ಪರಿಹಾರಕ್ಕಾಗಿ ಕೇಂದ್ರಕ್ಕೆ ಒತ್ತಾಯ

» **ಚಿತ್ರದುರ್ಗ**

ರಾಜ್ಯದಲ್ಲಿ ಬರಪರಿಸ್ಥಿತಿಯಿಂದ ವಾಸ್ತವಿಕವಾಗಿ ಸುಮಾರು 30 ಸಾವಿರ ಕೋಟಿ ರೂ. ಬೆಳೆಹಾನಿಯಾಗಿದೆ. ಎನ್ ಡಿ ಆರ್ ಎಫ್ ಮಾರ್ಗಸೂಚಿಯಂತೆ 4860 ಕೋಟಿ ರೂ. ಪರಿಹಾರವನ್ನು ಕೋರಲಾಗಿದ್ದು, ಈ ಮೊತ್ತವನ್ನು ಬಿಡುಗಡೆ ಮಾಡಬೇಕೆಂದು ಕೇಂದ್ರವನ್ನು ಒತ್ತಾಯಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಚಿತ್ರದುರ್ಗದ ಮುರುಘಾಮಠದ ಆವರಣದಲ್ಲಿ ವ್ ು ಾ ಧ್ ್ ಯ ವ್ ು ದ್ ವ್ ರ್ ೊ ಂ ದಿ ಗ್ ಮಾತನಾಡಿದರು.

ರಾಜ್ಯದ ಬರಪರಿಸ್ಥಿತಿಯ ಅಧ್ಯಯನಕ್ಕಾಗಿ ಕೇಂದ್ರ ಬರ ಅಧ್ಯಯನ ತಂಡ ಆಗಮಿಸಿರುವ ಬಗ್ಗೆಪ್ರತಿಕ್ರಿಯೆ ನೀಡುತ್ತಾ, ಕೇಂದ್ರದ ಅಧ್ಯಯನ ತಂಡಕ್ಕೆ ರಾಜ್ಯದಲ್ಲಿ ತಲೆದೋರಿರುವ ಬರಪರಿಸ್ಥಿತಿಯ ವಸ್ತುಸ್ಥಿತಿಯನ್ನು ಈಗಾಗಲೇ ವಿವರಿಸಲಾಗಿದೆ. ಒಟ್ಟು 236 ತಾಲ್ಲೂಕುಗಳಲ್ಲಿ 195 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಸುಮಾರು 30 ಸಾವಿರ ಕೋಟಿ ರೂ. ಗಳಿಗೂ ಹೆಚ್ಚಿನ ಬೆಳೆಹಾನಿ ಸಂಭವಿಸಿದೆ. 42 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಸುಮಾರು ಶೇ. 52 ರಷ್ಟು ಬೆಳೆಹಾನಿಯಾಗಿದೆ. ಕೃಷ್ಣಾ ಮೇಲ್ದಂಡೆ ಹಾಗೂ ನಾರಾಯಣಪುರ ಜಲಾಶಯಗಳನ್ನು ಹೊರತುಪಡಿಸಿ , ಕಾವೇರಿಸೇರಿದಂತೆಇನ್ನುಳಿದಜಲಾನಯನ ಪ್ರದೇಶದಗಳಲ್ಲಿ ನೀರಿರುವುದಿಲ್ಲ. ಕೇಂದ್ರದ ಮಾರ್ಗಸೂಚಿಯಂತೆ 4860 ಕೋಟಿ ರೂ.ಗಳ ಪರಿಹಾರವನ್ನು ಕೇಂದ್ರದಿಂದ ಕೋರಲಾಗಿದೆ. ಈ ಬಾರಿ ಹಸಿರು ಬರ ಉಂಟಾಗಿದೆ. ಕೇಂದ್ರದ ಅಧ್ಯಯನ ತಂಡ ಮೂರು ತಂಡಗಳಲ್ಲಿ ರಾಜ್ಯದ 11 ಜಿಲ್ಲೆಗಳಿಗೆ ಭೇಟಿ ನೀಡುತ್ತಿದೆ. ಅವರು ಕೇಂದ್ರಕ್ಕೆ ವರದಿ ಸಲ್ಲಿಸಿದ ನಂತರ , ವರದಿ ಆಧರಿಸಿದಂತೆ ಕೇಂದ್ರ ಪರಿಹಾರ ನೀಡಲಿದೆ ಎಂದರು.



ಪುಟ ↘ 2






## ಪ್ರಮುಖ ಸುದ್ದಿ

# ಬಿಜೆಪಿ–ಜೆಡಿಎಸ್ ಅಪವಿತ್ರ ಮೈತ್ರಿ



» **ಚಿತ್ರದರ್ಗ**

ಬಿಜೆಪಿ– ಜೆಡಿಎಸ್ ನದ್ದು ಅಪವಿತ್ರ ಮೈತ್ರಿ. ಜನತಾ ದಳ (ಜಾತ್ಯಾತೀತ) ಕೋಮುವಾದಿ ಪಕ್ಷದೊಂದಿಗೆ ಮೈತ್ರಿ ಮಾಡಿಕೊಳ್ಳುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಚಿತ್ರದುರ್ಗದಲ್ಲಿ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ ಮಾತನಾಡಿದ ಸಿಎಂ ಅವರು

ಮೈತ್ರಿ ಬಗ್ಗೆ ಕೆಲವು ಶಾಸಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂದರು.

**ಮದ್ಯದಂಗಡಿ ತೆರೆಯುವುದಿಲ್ಲ:** ಒಂದು ಸಾವಿರ ಮದ್ಯದಂಗಡಿಗಳನ್ನು ತೆರೆಯುವುದಾಗಿ ಚಿಂತನೆ ನಡೆಸುತ್ತಿರುವುದಾಗಿ ಸಚಿವರು ಹೇಳಿಕೆ ನೀಡಿದ್ದಾರೆ, ಆದರೆ ನಾವು ತೆರೆಯುವುದಿಲ್ಲ ಎಂದು ಹೇಳಿದರು.

**ಅಭಿವೃದ್ಧಿ ಕಾರ್ಯಕ್ರಮಗಳಿಗೆ ಅನುದಾನದ ಕೊರತೆ ಇಲ್ಲ:** ಗ್ಯಾರಂಟಿಗಳಿಗಾಗಿ ರಾಜ್ಯದ ಅಭಿವೃದ್ಧಿಗೆ ಸರ್ಕಾರ ಬ್ರೇಕ್ ಹಾಕಿದೆ ಎಂದು ಬಿಜೆಪಿ ಮಾಡಿರುವ ಆರೋಪಕ್ಕೆ ಪ್ರತಿಕ್ರಿಯೆ ನೀಡಿ, ರಾಜ್ಯದ ಆರ್ಥಿಕ ಪರಿಸ್ಥಿತಿ ಹಾಳು ಮಾಡಿದವರೇ ಹಾಳು ಮಾಡಿದವರೇ ಬಿಜೆಪಿಯವರು. ಅವರಿಗೆ ಯಾವ ನೈತಿಕತೆ ಇದೆ.

ಪುಟ ↘ 2





## ಫಾಸ್ಟ್ ನ್ಯೂಸ್

### ಅ.15 ರಿಂದ 23 ರವರೆಗೆ ಮೈಸೂರು ದಸರಾ ಕನ್ನಡ ಪುಸ್ತಕ ಮಾರಾಟ ಮೇಳ

» **ಚಿತ್ರದುರ್ಗ**

ಜಗತ್ತಿನ ಪ್ರಸಿದ್ಧ ಮೈಸೂರು ದಸರಾ ಉತ್ಸವ-2023ರಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ದಸರಾ ಮಹೋತ್ಸವ ಸಮಿತಿ ಸಂಯುಕ್ತಾಶ್ರಯದಲ್ಲಿ ಇದೇ ಅಕ್ಟೋಬರ್ 15 ರಿಂದ 23 ರವರೆಗೆ ಮೈಸೂರು ದಸರಾ ಕನ್ನಡ ಪುಸ್ತಕ ಮಾರಾಟ ಮೇಳ-2023"ನ್ನು ಮೈಸೂರಿನ ಹಳೆಯ ಡಿ.ಸಿ. ಆಫೀಸ್ ಪಕ್ಕದ ಓವಲ್ ಗ್ರೌಂಡ್‌ನಲ್ಲಿ ಏರ್ಪಡಿಸಲಾಗುವುದು.

ಈ ಪುಸ್ತಕ ಮೇಳದಲ್ಲಿ ಕನ್ನಡ ಪ್ರಕಾಶಕರು/ಮಾರಾಟಗಾರರು ಭಾಗವಹಿಸಬಹುದಾಗಿದ್ದು, ಮಳಿಗೆಯೊಂದಕ್ಕೆ ರೂ.1,000-00ಗಳ ಭದ್ರತಾ ಠೇವಣಿ ಡಿ.ಡಿ.ಯನ್ನು ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು ಇವರ ಹೆಸರಿನಲ್ಲಿ ಡಿಡಿಗಳನ್ನು ಸಲ್ಲಿಸುವುದು. ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ಪ್ರಕಾಶಕರು/ಮಾರಾಟಗಾರರು ನಿಗದಿತ ಅರ್ಜಿನಮೂನೆಯನ್ನು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡಭವನ, ಜೆ.ಸಿ.ರಸ್ತೆ, ಬೆಂಗಳೂರಿನ ಕಛೇರಿ ಅಥವಾ ಆಯಾಜಿಲ್ಲೆಯಲ್ಲಿರುವ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಚೇರಿಗಳಲ್ಲಿ ಅಥವಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಂದರೆ https://kpp.karnataka.gov.in ನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ. ಭರ್ತಿ ಮಾಡಿದ ಅರ್ಜಿಯನ್ನು ಡಿ.ಡಿ.ಯೊಂದಿಗೆ ಅಕ್ಟೋಬರ್ 12ರಂದು ಸಂಜೆ 5.00ರೊಳಗೆ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡಭವನ, ಜೆ.ಸಿ.ರಸ್ತೆ, ಬೆಂಗಳೂರು ಅವರ ಹೆಸರಿಗೆ ಅಂಚೆಯ ಮೂಲಕ ಹಾಗೂ ಇ-ಮೇಲ್ kannadappradhikara@gmail.com ರ ಮೂಲಕ ಸಲ್ಲಿಸಲು ಕೋರಿದೆ. ನಿರ್ಮಿಸಲಾಗುವ 60 ಮಳಿಗೆಗಳನ್ನು ಆದ್ಯತೆಯ ಮೇರೆಗೆ ಹಂಚಿಕೆಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡಭವನ, ಜೆ.ಸಿ.ರಸ್ತೆ, ಬೆಂಗಳೂರು-560002 ದೂ.080-22484516/22107704 ಅನ್ನು ಸಂಪರ್ಕಿಸಬಹುದಾಗಿದೆ.

### ವಿದ್ಯಾರ್ಥಿವೇತನಕ್ಕೆ ಅರ್ಜಿ

» **ದಾವಣಗೆರೆ**

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ 2023-24ನೇ ಸಾಲಿನಲ್ಲಿ ಪೋಸ್ಟ್ ಮೆಟ್ರಿಕ್ ತರಗತಿಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಜಿಲ್ಲೆಯ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಪಡೆಯಲು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವೆಬ್ ಸೈಟ್ URL for Fresh application: https://ssp.postmatric.karnataka.gov.in/2324_sa/signin.aspx ಮತ್ತು URL for Renewal application: https://ssp.postmatric.karnataka.gov.in/CA/ ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿಕೊಂಡು ಅರ್ಜಿ ಸಲ್ಲಿಸಬಹುದು.

**ಬೆಳೆದ ಬೆಳೆಗೆ ಬೆಲೆ ಇಲ್ಲ. ಅತಿವೃಷ್ಟಿ, ಅನಾವೃಷ್ಟಿ, ಬರಗಾಲ ರೈತರನ್ನು ಕಾಡುತ್ತಿದೆ. ಹೀಗಾಗಿ ಬದಲಾದ ವಾತಾವರಣಕ್ಕೆ ತಕ್ಕಂತೆ ರೈತ ಪರವಾದ ಸಂಶೋದನೆಗಳು ನಡೆಯಬೇಕು: ಮುಖ್ಯಮಂತ್ರಿ ಸಿದ್ದರಾಮಯ್ಯ**

# ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕಲ್ಲೂ ಬರ

ಕೃಷಿ ವಿವಿ ಗಳಿಂದ ಎಷ್ಟು ಪದವೀದರರು ಹೊರಗೆ ಬಂದರು ಎನ್ನುವುದು ಮುಖ್ಯವಲ್ಲ. ಎಷ್ಟು ತಳಿಗಳನ್ನು ಅಭಿವೃದ್ಧಿ ಪಡಿಸಿದ್ದೀರಿ ಎನ್ನುವುದು ಮುಖ್ಯ

ಸಂಶೋಧನೆಗಳಿಗೆ ಸಕಲ ನೆರವು ನೀಡಲು ಸರ್ಕಾರ ಸಿದ್ದವಾಗಿದೆ. ಬದ್ದವಾಗಿದೆ: ಸಿಎಂ ಸಿದ್ದರಾಮಯ್ಯ ಕರೆ

ಬರಗಾಲ ಬಂದಿದ್ದರೂ ನಾವು ರೈತ ಸಮುದಾಯದ ಪರವಾಗಿ ಗಟ್ಟಿ ನಿಂತಿದ್ದೇವೆ: ಸಿಎಂ ಸಿದ್ದರಾಮಯ್ಯ ಅಭಯ





» **ಹಿರಿಯೂರು**

ಕೃಷಿ ವಿಶ್ವ ವಿದ್ಯಾಲಯಗಳಿಂದ ಎಷ್ಟು ಪದವೀದರರು ಹೊರಗೆ ಬಂದರು ಎನ್ನುವುದು ಮುಖ್ಯವಲ್ಲ. ಎಷ್ಟು ತಳಿಗಳನ್ನು ಅಭಿವೃದ್ಧಿ ಪಡಿಸಿದ್ದೀರಿ ಎನ್ನುವುದು ಮುಖ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ , ಹಿರಿಯೂರು ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ ಬಬ್ಬೂರು ಫಾರಂನ ಶತಮಾನೋತ್ಸವ ಮತ್ತು ಸಿರಿಧಾನ್ಯ ಮೇಳ ಮತ್ತು ತೋಟಗಾರಿಕೆ ಬೆಳೆಗಳ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದರು.

ಸಂಶೋಧನೆಗಳಿಗೆ ಸಕಲ ನೆರವು ನೀಡಲು ಸರ್ಕಾರ ಸಿದ್ದವಾಗಿದೆ ಮತ್ತು ಬದ್ದವಾಗಿದೆ. ಎಷ್ಟು ತಳಿ, ಎಷ್ಟು ರೋಗಕ್ಕೆ ಔಷಧ ಕಂಡು ಹಿಡಿದಿದ್ದೀರಿ, ಎಷ್ಟು ರೋಗನಿರೋಧಕ ಔಷಧಗಳನ್ನು ಕಂಡು ಹಿಡಿದಿದ್ದೀರಿ ಎನ್ನುವುದು ನಿಮ್ಮ ಆಧ್ಯತೆಯಾಗಲಿ ಎಂದು ಕರೆ ನೀಡಿದರು.

ಬೆಳೆದ ಬೆಳೆಗೆ ಬೆಲೆ ಇಲ್ಲ. ಅತಿವೃಷ್ಟಿ, ಅನಾವೃಷ್ಟಿ, ಬರಗಾಲ ರೈತರನ್ನು ಕಾಡುತ್ತಿದೆ. ಹೀಗಾಗಿ ಬದಲಾದ ವಾತಾವರಣಕ್ಕೆ ತಕ್ಕಂತೆ ರೈತ ಪರವಾದ ಸಂಶೋದನೆಗಳು ನಡೆಯಬೇಕು. ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳು ಬರಗಾಲಕ್ಕೆ ತುತ್ತಾಗಿವೆ ಎಂದರು. 80 ಲಕ್ಷ ಹೆಕ್ಟೇರ್ ನಲ್ಲಿ ಬಿತ್ತನೆ ಆಗಿದ್ದರೆ 42 ಲಕ್ಷ ಹೆಕ್ಟೇರ್ ಬೆಳೆ ನಷ್ಟವಾಗಿದೆ. ಹೀಗಾಗಿ ರಾಜ್ಯ ಮತ್ತು ರಾಜ್ಯದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. 4860 ಕೋಟಿ ಪರಿಹಾರ ಕೋರಿ ಕೇಂದ್ರಕ್ಕೆ ನಾವು ಮನವಿ ಮಾಡಿದ್ದರೂ ನಮಗೆ ಆಗಿರುವ ನಷ್ಟದ ಪ್ರಮಾಣ 30 ಸಾವಿರ ಕೋಟಿಗೂ ಅಧಿಕ. ಇದನ್ನೆಲ್ಲಾ ಕೇಂದ್ರ ಬರ ಅಧ್ಯಯನ ತಂಡ ಪರಿಶೀಲನೆ ನಡೆಸುತ್ತಿದೆ. ಚಿತ್ರದುರ್ಗ ಮೊದಲೇ ಬರ ಪೀಡಿತ ಜಿಲ್ಲೆ. ಈಗ ಇನ್ನಷ್ಟು ಬರಗಾಲಕ್ಕೆ ತುತ್ತಾಗಿದೆ. ಕೇಂದ್ರ ಸರ್ಕಾರ ಎಷ್ಟಾದರೂ ಪರಿಹಾರ ನೀಡಲಿ. ನಮ್ಮ ಸರ್ಕಾರ ಮಾತ್ರ ಜನರಿಗೆ, ರೈತರಿಗೆ, ರಾಸುಗಳಿಗೆ, ಗೋವುಗಳಿಗೆ ಏನೂ ತೊಂದರೆ ಆಗದಂತೆ ನೋಡಿಕೊಳ್ಳಲು ಬದ್ದವಾಗಿದೆ. ಈ ಬಗ್ಗೆ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.

ಚಿತ್ರದುರ್ಗ ಜಿಲ್ಲೆಗೆ ಕೃಷಿ ಮತ್ತು ಕುಡಿಯುವ ನೀರಿಗಾಗಿ ಅಗತ್ಯ ಎಲ್ಲಾ ಕ್ರಮಗಳನ್ನು ಕೈಗೊಳ್ಳಲು ನಾವು ಬದ್ದರಾಗಿದ್ದೇವೆ. ನೀರಾವರಿ, ಕೃಷಿಗೆ ಹೆಚ್ಚಿನ ಅನುದನ ನೀಡುತ್ತೇವೆ. ರೈತ ಸಮುದಾಯದ ಜತೆ ನಾವು ಗಟ್ಟಿಯಾಗಿ ನಿಂತಿದ್ದೇವೆ ಎಂದು ಭರವಸೆ ನೀಡಿದರು.

ಕೃಷಿ, ತೋಟಗಾರಿಕಾ ವಿವಿ ಗಳಲ್ಲಿ ಸಂಶೋಧನೆಗಳು ಹೆಚ್ಚೆಚ್ಚು ಆಗಬೇಕು. ಹವಾಮಾನ ಬದಲಾವಣೆಯಲ್ಲಿ ಯಾವ ಬೆಳೆಗೆ ಹೆಚ್ಚು ಮಹತ್ವವಿದೆ, ರೈತರಿಗೆ ಯಾವ ಬೆಳೆಯಿಂದ ಅನುಕೂಲವಾಗಲಿದೆ ಎನ್ನುವುದರ ಕುರಿತು ಅಧ್ಯಯನ ನಡೆಸಬೇಕು. ಕೃಷಿ ವಿವಿ ಗಳಿಂದ ಎಷ್ಟು ಪದವೀದರರು ಹೊರಗೆ ಬಂದರು ಎನ್ನುವುದು ಮುಖ್ಯವಲ್ಲ. ಎಷ್ಟು ತಳಿಗಳನ್ನು ಅಭಿವೃದ್ಧಿ ಪಡಿಸಿದ್ದೀರಿ ಎನ್ನುವುದು ಮುಖ್ಯ ಎಂದರು. ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಸ್ಮರಣ ಸಂಚಿಕೆಯನ್ನು ಕೃಷಿ ಸಚಿವ ಎನ್.ಚೆಲುವರಾಯಸ್ವಾಮಿ ಅವರು ಬಿಡುಗಡೆಗೊಳಿಸಿದರು.

ಮುಖ್ಯ ಅತಿಥಿಗಳಾಗಿ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಹೊಳಲ್ಕೆರೆ ಶಾಸಕರಾದ ಡಾ.ಎ.ಚಂದ್ರಪ್ಪ, ಚಿತ್ರದುರ್ಗದ ಶಾಸಕರಾದ ಕೆ.ಸಿ.ವೀರೇಂದ್ರ ಪಪ್ಪಿ, ಮೊಳಕಾಲ್ಮೂರು ಕ್ಷೇತ್ರದ ಶಾಸಕರಾದ ಎನ್.ವೈ. ಗೋಪಾಲಕೃಷ್ಣ, ಹೊಸದುರ್ಗ ಶಾಸಕರಾದ ಬಿ.ಜೆ.ಗೋವಿಂದಪ್ಪ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ,ಮಾಜಿ ಲೋಕಸಭಾ ಸದಸ್ಯರಾದ ಎಂ.ಚಂದ್ರಪ್ಪ, ಮಾಜಿ ಸಚಿವ ಎಚ್.ಆಂಜನೇಯ , ಕೃಷಿ ತಜ್ಞ ಏಕಾಂತಯ್ಯ, ಸೇರಿದಂತೆ ಹತ್ತಾರು ಮಂದಿ ಪ್ರಗತಿಪರ ರೈತರು ಮತ್ತು ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

### 4860 ಕೋಟಿ ರೂ. ಬೆಳೆ ಪರಿಹಾರಕ್ಕಾಗಿ ಒತ್ತಾಯ

» **ಮೊದಲ ಪುಟದಿಂದ**

**ಭದ್ರಾ ಮೇಲ್ದಂಡೆ ಯೋಜನೆಗೆ ಪ್ರಾಧಾನ್ಯತೆ :** ಭದ್ರಾ ಮೇಲ್ದಂಡೆ ಯೋಜನೆ ಅನುಷ್ಠಾನದಲ್ಲಿನ ವಿಳಂಬವಾಗುತ್ತಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, ಹಿಂದಿನ ಸರ್ಕಾರದವರು ಈ ಯೋಜನೆಯನ್ನು ಕೇಂದ್ರ ಸರ್ಕಾರ ರಾಷ್ಟ್ರೀಯ ಯೋಜನೆಯೆಂದು ಘೋಷಿಸಿ, 5300 ಕೋಟಿ ರೂ. ಬಿಡುಗಡೆ ಮಾಡಲಿದೆ ಎಂದಿದ್ದರು. ಆದರೆ ಇದುವರೆಗೆ ಕೇಂದ್ರದಿಂದ ಯಾವುದೇ ಹಣ ಬಿಡುಗಡೆಯಾಗಿಲ್ಲ. ಈ ಮೊತ್ತವನ್ನು ಆದಷ್ಟು ಬೇಗನೆ ಬಿಡುಗಡೆಗೊಳಿಸುವಂತೆ ಕೇಂದ್ರಕ್ಕೆ ಮತ್ತೊಮ್ಮೆ ಕೋರಲಾಗಿದೆ. ನಮ್ಮ ಸರ್ಕಾರವು ನೀರಾವರಿ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡುತ್ತದೆ. ಕೃಷ್ಣಾ ಮೇಲ್ದಂಡೆ ಯೋಜನೆಗೆ ವಿಶೇಷ ಪ್ರಾಧಾನ್ಯತೆ ನೀಡಲಾಗುವುದು. ಪ್ರಸಕ್ತ ವರ್ಷ ಹಾಗೂ ಮುಂದಿನ ವರ್ಷವೂ ಕೂಡ ಈ ಯೋಜನೆಗೆ ಅನುದಾನ ಬಿಡುಗಡೆ ಮಾಡಲಾಗುವುದು ಎಂದರು.

7 ನೇ ವೇತನ ಆಯೋಗದ ಅಧ್ಯಕ್ಷರೊಂದಿಗೆ ಮಾತನಾಡಿದ್ದು, ವರದಿ ಸಲ್ಲಿಕೆಯಾದ ನಂತರ ತೀರ್ಮಾನ ಕೈಗೊಳ್ಳಲಾಗುವುದು. ನಿಗಮ ಮಂಡಳಿಗಳ ಅಧ್ಯಕ್ಷರನ್ನು ನೇಮಕ ಮಾಡಲಾಗುತ್ತಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.ಈ ಸಂದರ್ಭದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಡಿ.ಸುಧಾಕರ್, ಕೃಷಿ ಸಚಿವ ಎನ್.ಚೆಲುವರಾಯಸ್ವಾಮಿ ಶಾಸಕರಾದ ಟಿ.ರಘುಮೂರ್ತಿ, ಬಿ.ಜಿ.ಗೋವಿಂದಪ್ಪ, ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ, ಜಿ.ಪಂ.ಸಿಇಓ ಎಸ್.ಜಿ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಮೀನಾ, ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ, ಉಪವಿಭಾಗಧಿಕಾರಿ ಆರ್.ಕಾರ್ತಿಕ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್, ತಹಶೀಲ್ದಾರ್ ಡಾ.ನಾಗವೇಣಿ, ನಗರಸಭೆ ಪೌರಾಯುಕ್ತೆ ರೇಣುಕಾ, ಮಾಜಿ ಮಂತ್ರಿ ಹೆಚ್.ಆಂಜನೇಯ, ಮಾಜಿ ಸಂಸದ ಎಂ.ಚಂದ್ರಪ್ಪ, ಸೇರಿದಂತೆ, ಹಿರಿಯ ಅಧಿಕಾರಿಗಳು, ಮುಖಂಡರು ಉಪಸ್ಥಿತರಿದ್ದರು.

### ಬಿಜೆಪಿ-ಜೆಡಿಎಸ್ ಅಪವಿತ್ರ ಮೈತ್ರಿ

» **ಮೊದಲ ಪುಟದಿಂದ**

ನಮ್ಮ ಕಾಲದಲ್ಲಿ ಯಾವತ್ತೂ ಇಷ್ಟೊಂದು ಸಾಲ ಮಾಡಿರಲಿಲ್ಲ. ಹಾಗೂ ಈ ಮೊತ್ತದ ಬದ್ಧತೆ ವೆಚ್ಚ ಇರಲಿಲ್ಲ. ಎಲ್ಲಾ ಹಾಳು ಮಾಡಿ ಈಗ ಹೇಳುತ್ತಾರೆ ಎಂದರು, ಕಾಂಗ್ರೆಸ್ ಪಕ್ಷದ ಶಾಸಕರೇ ಈ ಆರೋಪ ಮಾಡುತ್ತಿದ್ದಾರೆ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ, ಹೆಚ್ಚುವರಿ ಅನುದಾನ ದೊರೆಯುತ್ತಿಲ್ಲ ಎಂದು ಹೇಳಿದ್ದಾರೆ. ನಿಯಮಿತ ಅನುದಾನ ದೊರೆಯುತ್ತಿದೆ ಎಂದರು. ಭದ್ರಾ ಯೋಜನೆಗೆ 200 ಕೋಟಿ ರೂ.ಗಳನ್ನು ಭೂ ಸ್ವಾಧೀನಕ್ಕೆ ನೀಡಲಾಗಿದೆ. ಕಾರ್ಯಕ್ರಮಗಳಿಗೆ ಅನುದಾನದ ಕೊರತೆ ಇಲ್ಲ ಹಾಗೂ ಗ್ಯಾರಂಟಿ ಯೋಜನೆಗಳಿಗೂ ಅನುದಾನದ ಕೊರತೆ ಇಲ್ಲ ಎಂದು ಮುಖ್ಯಮಂತ್ರಿಗಳು ಸ್ಪಷ್ಟಪಡಿಸಿದರು.

**ಯಾವುದರ ಬಗ್ಗೆ ಸತ್ಯ ಶೋಧನೆ ಮಾಡುತ್ತಾರೆ?:** ಬಿಜೆಪಿ ಸತ್ಯ ಶೋಧನಾ ಸಮಿತಿ ಶಿವಮೊಗ್ಗಕ್ಕೆ ಭೇಟಿ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಸತ್ಯ ಶೋಧನೆ ಮಾಡಲು ಏನಾಗಿದೆ ಎಂದು ಪ್ರಶ್ನಿಸಿದರು. ಯಾವುದರ ಬಗ್ಗೆ ಸತ್ಯ ಶೋಧನೆ ಮಾಡುತ್ತಾರೆ? ಈದ್-ಮಿಲಾದ್ ಸಂದರ್ಭದಲ್ಲಿ ಮುಸ್ಲಿಮರು ಮೆರವಣಿಗೆ ಮಾಡುತ್ತಿದ್ದ ಸಂದರ್ಭದಲ್ಲಿ, ಯಾರು ಕಲ್ಲು ಎಸೆದಿದ್ದಾರೋ ಅವರ ಮೇಲೆ ಕ್ರಮ ಜರುಗಿಸಲಾಗಿದೆ. ಅವರು ಯಾವ ಪಕ್ಷದವರೇ ಆಗಿದ್ದರೂ, ಯಾರೇ ಆಗಿದ್ದರೂ ಅವರನ್ನು ಬಿಡಬೇಡಿ, ಕಾನೂನು ಕೈಗೆತ್ತಿಕೊಳ್ಳಲು ಬಿಡಬೇಡಿ ಎಂದು ಬಹಳ ಸ್ಪಷ್ಟವಾಗಿ ತಿಳಿಸಲಾಗಿದೆ ಎಂದರು.

# ಬಬ್ಬೂರು ಫಾರಂ ಶತಮಾನೋತ್ಸವ ಸಮಾರಂಭ

## ಕೃಷಿ ಹಾಗೂ ತೋಟಗಾರಿಕೆ ವಿಶ್ವ ವಿದ್ಯಾಲಯಗಳು ಸಂಶೋಧನೆ ಹೆಚ್ಚಿನ ಒತ್ತು ನೀಡಲಿ: ಮುಖ್ಯಮಂತ್ರಿ ಸಿದ್ಧರಾಮಯ್ಯ

» **ಚಿತ್ರದುರ್ಗ**

ಕೃಷಿ ಹಾಗೂ ತೋಟಗಾರಿಕೆ ವಿಶ್ವವಿದ್ಯಾಲಯಗಳಲ್ಲಿ ಪದವಿ ವಿದ್ಯಾರ್ಥಿಗಳನ್ನು ತಯಾರು ಮಾಡುವುದರ ಜೊತೆಗೆ, ಸಂಶೋಧನೆ ಹೆಚ್ಚಿನ ಒತ್ತು ನೀಡಬೇಕು. ಹವಮಾನ ವೈಪರೀತ್ಯಕ್ಕೆ ಹೊಂದಿಕೊಳ್ಳುವ, ಸಹಿಷ್ಣುತೆ ಹಾಗೂ ರೋಗ ನಿರೋಧಕ ಶಕ್ತಿವುಳ್ಳ ತಳಿಗಳನ್ನು ಅಭಿವೃದ್ಧಿ ಪಡಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಹಿರಿಯೂರು ತಾಲ್ಲೂಕು ಬಬ್ಬೂರು ಫಾರಂ ಆವರಣದಲ್ಲಿ ಶುಕ್ರವಾರ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ವತಿಯಿಂದ ಆಯೋಜಿಸಲಾದ ಬಬ್ಬರೂ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರದ ಶತಮಾನೋತ್ಸವ ಸಮಾರಂಭ ಹಾಗೂ ಸಿರಿಧಾನ್ಯ ಮೇಳ ಮತ್ತು ತೋಟಗಾರಿಕೆ ಬೆಳೆಗಳ ವಿಚಾರಸಂಕಿರಣದ ಉದ್ಘಾಟಸಿ ಅವರು ಮಾತನಾಡಿದರು.

2016 ರಲ್ಲಿ ಕೃಷಿ ಸಂಶೋಧನಾ ಕೇಂದ್ರ ಶತಮಾನೋತ್ಸವ ಆಚರಸಬೇಕಿತ್ತು. ಈಗ ಸಂಶೋಧನಾ ಕೇಂದ್ರಕ್ಕೆ 107 ವರ್ಷ ತುಂಬಿದೆ. ಕಾರಣಾಂತರಗಳಿಂದ ಈಗ ಆಚರಿಸಲಾಗುತ್ತದೆ. ರೈತರ ಪರವಾಗಿ ಸಂಶೋಧನಾಕೇಂದ್ರಹೆಚ್ಚುಬೆಳೆಯಲಿ.ದೇಶದ ಅಭಿವೃದ್ಧಿ ಅವಲೋಕಿಸಲು ಆ ದೇಶದಲ್ಲಿನ ವಿಶ್ವ ವಿದ್ಯಾಲಯ ಹಾಗೂ ಸಂಶೋಧನ ಕೇಂದ್ರಗಳು ಅಳೆತೆಗೋಲುಗಳಾಗಿವೆ. ಇಲ್ಲಿ ಸಂಶೋಧನೆಗಳು ಫಲಪ್ರದವಾದರೆ ದೇಶ ಅಭಿವೃದ್ಧಿ ಆಗುತ್ತದೆ ಎಂದರು.

ಬರಗಾಲ, ಅತಿವೃಷ್ಟಿ, ಬೆಲೆ ದೊರಕದೆ, ಹವಾಮಾನ ಬದಲಾವಣೆಗೆ ಹೊಸ ತಳಿ ಸಿಗದೆ, ಬೆಳೆಗಳನ್ನು ದಾಸ್ತಾನು ಮಾಡಲು ಗೋದಾಮುಗಳು ಇಲ್ಲದೆ, ಬೆಳೆಗಳನ್ನು ಸಂಸ್ಕರಣೆ ಮಾಡದೇ, ಮೌಲ್ಯವರ್ಧಿತ ಉತ್ಪನ್ನ ತಯಾರಿಸದೇ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಇವುಗಳಿಗೆ ಉತ್ತರವನ್ನು ಕೃಷಿ ಹಾಗೂ ತೋಟಗಾರಿಕೆ ಸಂಶೋಧನಾ ಕೇಂದ್ರಗಳು ಹುಡುಕಬೇಕು. ಇಲ್ಲಿನ ಸಂಶೋಧನೆಗಳು ರೈತರ ಭೂಮಿಯಲ್ಲಿ ಫಲಕಾಣಬೇಕು. ವಿಸ್ತರಣಾ ಚಟುವಟಿಕೆಗಳು ಹೆಚ್ಚಾಗಬೇಕು ಎಂದು ಸಲಹೆ ನೀಡಿದರು.

ಚಿತ್ರದುರ್ಗ ಮೊದಲೇ ಬರ ಪೀಡಿತ ಜಿಲ್ಲೆ, ಬರಗಾಲ ಬಂದರೆ ಜಿಲ್ಲೆ ರೈತರು ಸಂಕಷ್ಟಕ್ಕೆ ಸಿಲುಕಿತ್ತಾರೆ. ಬಬ್ಬೂರು ಕೇಂದ್ರದಲ್ಲಿ ಸಂಶೋಧನೆಗಳು ಹೆಚ್ಚು ಆಗಬೇಕು. ಹೊಸ ತಳಿಗಳನ್ನು ಅಭಿವೃದ್ಧಿ ಪಡಿಸಬೇಕು. ಜಗತ್ತೇ ಹವಾಮಾನ ಬದಲಾವಣೆಗೆ ತುತ್ತಾಗಿದೆ. ಇಂತಹ ಸಂದರ್ಭದಲ್ಲಿ ಹೆಚ್ಚು ನಿರೋಧಕ ಹಾಗೂ ಸಹಿಷ್ಣುತೆ ಶಕ್ತಿ ಇರುವ ಹಾಗೂ ಕಡಿಮೆ ನೀರಿನಲ್ಲಿ ಬೆಳೆಯುವ ತಳಿಗಳನ್ನು ಅಭಿವೃದ್ಧಿ ಪಡಿಸಬೇಕು. ರೈತರ ಸಂಕಷ್ಟ ಸ್ಪಂದನೆ ಮಾಡಬೇಕು. ಸಂಶೋಧನೆಗೆ ಸರ್ಕಾರ ಎಲ್ಲಾ ರೀತಿಯ ಅನುದಾನ ಹಾಗೂ ಸಹಕಾರ ನೀಡಲಿದೆ ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದರು.

**ವಿ.ವಿ.ಸಾಗರಕ್ಕೆ 6 ಟಿ.ಎಂ.ಸಿ ನೀರು :** ಮೈಸೂರು ಅರಸರು ಹಾಗೂ ಸರ್. ಎಂ.ವಿಶ್ವೇಶ್ವರಯ್ಯನವರ ದೂರ ದೃಷ್ಟಿಯ ಫಲವಾಗಿ ವಾಣಿ ವಿಲಾಸ ಸಾಗರ ಅಣೆಕಟ್ಟು ನಿರ್ಮಿಸಲಾಯಿತು. 12 ಸಾವಿರ ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿತ್ತು. ಸದ್ಯ ನೀರಾವರಿ ಅವಲಂಬಿತ ಪ್ರದೇಶ 40 ಸಾವಿರ ಎಕರೆಗೆ ವಿಸ್ತರಿಸಿದೆ. ಭದ್ರಾ ಮೇಲ್ದಂಡೆ ಹಾಗೂ ಎತ್ತಿನಹೊಳೆ ಯೋಜನೆಯಿಂದ 6 ಟಿ.ಎಂ.ಸಿ ನೀರನ್ನು ವಾಣಿ ವಿಲಾಸ ಸಾಗರಕ್ಕೆ ನೀಡಲು ರೈತರು ಮನವಿ ಸಲ್ಲಿಸಿದ್ದಾರೆ. ಈ ಕುರಿತು ಗಂಭೀರ ಚಿಂತನೆ ಮಾಡಿ, ಈ ಬಗ್ಗೆ ಯೋಜನೆ ರೂಪಿಸಲು ನೀರಾವರಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಹಿರಿಯೂರು ಸಕ್ಕರೆ ಕಾರ್ಖಾನೆ ನಿರ್ವಹಣೆ ಖಾಸಗಿ ಅವರಿಗೆ ವಹಿಸಲು ಚಿಂತನೆ ಮಾಡಲಾಗುವುದು. ಬಬ್ಬರೂ ಸಂಶೋಧನಾ ಕೇಂದ್ರವಾಗಿ ಮುಂದುವರಿಯಲಿ ಎಂದು ಮುಖ್ಯಮಂತ್ರಿಗಳು ಹೇಳಿದರು.

**ಬರಸಮರ್ಥ ನಿರ್ವಹಣೆ:** ರಾಜ್ಯ ಭೀಕರ ಬರಗಾಲ ತುತ್ತಾಗಿದೆ. ರಾಜ್ಯದ 236 ತಾಲ್ಲೂಕುಗಳ ಪೈಕಿ



195 ತಾಲ್ಲೂಕು ಬರಕ್ಕೆ ತುತ್ತಾಗುವೆ. ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳನ್ನು ಬರ ಎಂದು ಘೋಷಿಸಿಲಾಗಿದೆ. ಸೋಮವಾರ ಮತ್ತೊಂದು ಸುತ್ತಿನ ಸಭೆ ನಡೆಯಲಿದೆ. ಬರ ತಾಲ್ಲೂಕಿನ ಸಂಖ್ಯೆ 210 ರಿಂದ 215ಕ್ಕೆ ಏರಬಹುದು.ಆಗಸ್ಟ್ ತಿಂಗಳಲ್ಲಿ ಮಳೆ ಬಾರದೆ ಇರುವುದರಿಂದ ಬರಕ್ಕೆ ಕಾರಣವಾಗಿದೆ. ರೈತರ ಬೆಳೆ ಕೈಗೆ ಬಾರದೆ ನಷ್ಟ ಉಂಟಾಗಿದೆ. ಈ ಬಾರಿಯ ಮುಂಗಾರಿನಲ್ಲಿ 80 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಆಗಿತ್ತು. 42 ಲಕ್ಷ ಹೆಕ್ಟೇರ್ ಪ್ರದೇಶ ಬೆಳೆ ನಾಶವಾಗಿದೆ. ಶೇ.52 ಬೆಳೆ ನಾಶದಿಂದ ರೂ. 30 ಸಾವಿರ ಕೋಟಿ ಕೃಷಿ ಕ್ಷೇತ್ರದ ನಷ್ಟವಾಗಿದೆ. ಇದಷ್ಟನ್ನು ಕೇಂದ್ರ ರಾಜ್ಯ ಸರ್ಕಾರ ಭರಿಸಲು ಸಾಧ್ಯವಿಲ್ಲ. ರಾಜ್ಯ ಸರ್ಕಾರ ಕೇಂದ್ರ ವಿಪತ್ತು ನಿರ್ವಹಣಾ ನಿಧಿ (ಎನ್.ಡಿ.ಆರ್.ಎಫ್) ಅಡಿಯಲ್ಲಿ ಕೇಂದ್ರ ಸರ್ಕಾರಕ್ಕೆ ರೂ.4860 ಕೋಟಿ ಪರಿಹಾರ ಕೇಳಿದ್ದೇವೆ. ಸದ್ಯ ಕೇಂದ್ರ ಬರ ಅಧ್ಯಯನ ತಂಡ ರಾಜ್ಯಕ್ಕೆ ಆಗಮಿಸಿದ್ದು. 11 ಜಿಲ್ಲೆಗಳಲ್ಲಿ ಬರ ಪರಿಸ್ಥಿತಿ ಬಗ್ಗೆ ಅಧ್ಯಯನ ನಡೆಸಿ, ಅವಲೋಕಿಸಿ ವರದಿ ನೀಡಲಿದೆ. ಸರ್ಕಾರ ಬರಗಾಲವನ್ನು ಸಮರ್ಥವಾಗಿ ಎದುರಿಸಲಿದೆ. ಜನರು ಹಾಗೂ ಜಾನುವಾರು ರಕ್ಷಣೆ ಮಾಡಲಾಗುವುದು. ಬರಗಾಲದಲ್ಲಿ ಕುಡಿಯುವ ನೀರಿಗೆ ತೊಂದರೆ ಆಗಬಾರದು ಎನ್ನುವ ಕಾರಣಕ್ಕೆ ಹೆಚ್ಚಿನ ಅನುದಾನ ನೀಡಲಾಗುವುದು. ಮೇವು ಸಂಗ್ರಹಣೆಗೂ ಸೂಚನೆ ನೀಡಲಾಗಿದೆ.

ಚಿತ್ರದುರ್ಗ ಜಿಲ್ಲಾಧಿಕಾರಿ ಹಾಗೂ ಜಿ.ಪ. ಸಿಇಓ ಬರಸ್ಥಿತಿ ಎದುರಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಬೇಕು. ಇದರಲ್ಲಿ ವಿಫಲವಾದರೆ ನಿಮ್ಮನ್ನೇ ಹೊಣೆ ಮಾಡಲಾಗುವುದು ಎಂದು ವೇದಿಕೆಯಲ್ಲಿಯೇ ಸೂಚನೆ ನೀಡಿದರು.

ಯೂರೋಪಿನ ಸಾರ್ವತ್ರಿಕ ಮೂಲ ಆದಾಯ ನೀತಿಯನ್ನು ರಾಜ್ಯದಲ್ಲಿ ಅಳವಡಿಕೊಳ್ಳಲಾಗಿದೆ. ಇದರ ಅನುಸಾರ ಗ್ಯಾರೆಂಟಿ ಯೋಜನೆಗಳನ್ನು ಜಾರಿ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು. ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ಮಾತನಾಡಿ, ವಿಶ್ವ ವಿದ್ಯಾಲಯಗಳು ಹಾಗೂ ವಿಜ್ಞಾನಿಗಳು ಸಂಶೋಧನೆ ಅವಶ್ಯಕತೆ ಇದೆ. ಕೃಷಿಗೆ ಸವಾಲುಗಳು ಹೆಚ್ಚಾಗಿವೆ. ಹವಾಮಾನ ವೈಪರೀತ್ಯ ಹೆಚ್ಚಾಗಿದೆ. ಇವೆಲ್ಲವನ್ನೂ ಗಮನದಲ್ಲಿ ಇರಿಸಿಕೊಂಡು , ರೈತರಿಗೆ ಬೇಸಾಯದಲ್ಲಿ ಅನುಕೂಲವಾಗುವ ಪದ್ಧತಿಗಳನ್ನು ಪರಿಚಯಸಬೇಕು. 123 ವರ್ಷದ ನಂತರ ರಾಜ್ಯದಲ್ಲಿ ಅತ್ಯಂತ ಕಡಿಮೆ ಮಳೆ ಬಂದಿದೆ. ಹತ್ತಿ ಹಾಗೂ ಕಬ್ಬು ನಲ್ಲಿ ಈ ಬಬ್ಬೂರು ಸಂಶೋಧನೆ ಕೇಂದ್ರ ಉತ್ತಮ ತಳಿಗಳನ್ನು ಪರಿಚಯಿಸಿದೆ. ಕೃಷಿ ಇಲಾಖೆಯಿಂದ ರೂ.35 ಸಾವಿರ ಕೋಟಿ ಯೋಜನೆಗಳನ್ನು ರೈತರಿಗೆ ಈ ವರ್ಷ ನೀಡಲಾಗುವುದು. ಮುಂದಿನ ವರ್ಷ 55 ಸಾವಿರ ಕೋಟಿ ಅನುದಾನ ನೀಡಲಾಗುವುದು. ಹಾಲಿಗೆ ರೂ.3 ಪ್ರೋತ್ಸಾಹ ಧನ ಹೆಚ್ಚಿಸಲಾಗಿದೆ. ರೈತರಿಗೆ ಬಡ್ಡಿ ರಹಿತ ಸಾಲ ನೀಡಲಾಗುತ್ತಿದೆ. ಬರಗಾಲ ಪರಿಶೀಲನಗೆ ಕೃಷಿ ಹಾಗೂ ಕಂದಾಯ ಸಚಿವರ ನೇತೃತ್ವದಲ್ಲಿ ಉಪ ಸಮಿತಿ ರಚನೆ ಮಾಡಿ, ರೈತರ ಬಗ್ಗೆ ಉದಾರವಾಗಿದ್ದು, ಬರಗಲಾದ ವರದಿ ನೀಡುವಂತೆ ಮುಖ್ಯಮಂತ್ರಿಗಳು ಸೂಚನೆ ನೀಡಿದರು. ಇದರಂತೆ 195 ತಾಲ್ಲೂಕೂಗಳು ಬರಗಾಲಕ್ಕೆ ತುತ್ತಾಗಿವೆ ಎಂದು ಕೇಂದ್ರಕ್ಕೆ ಶಿಫಾರಸ್ಸು ಮಾಡಲಾಗಿದೆ. ಕೇಂದ್ರ ಅಧ್ಯಯನ ತಂಡವು ರಾಜ್ಯ ಬಂದು ಪರಿಸ್ಥಿತಿ ಬಗ್ಗೆ ಅಧ್ಯಯನ ಮಾಡುತ್ತಿದೆ. ರಾಜ್ಯದ ಕೃಷಿ ವಿಶ್ವ ವಿದ್ಯಾಲಯಗಳಿಂದ ಹೊಸ ತಳಿಗಳನ್ನು ಹೊರತಬೇಕು. ಪರ್ಯಾಯ ಬೆಳೆಗಳಿಗೆ ಸಂಶೋಧನೆ ಮಾಡಬೇಕು. ನೆಟ್ಟಿ ರೋಗಕ್ಕೆ ಘೋಷಿಸಲಾದ ರೂ.223 ಕೋಟಿ ಹಣದಲ್ಲಿ ರೂ.148 ಕೋಟಿಗಳನ್ನು ಮುಖ್ಯಮಂತ್ರಿಗಳು ಬಿಡುಗಡೆ ಮಾಡಿದೆ. ಸರ್ಕಾರದಿಂದ ಕೃಷಿಭಾಗ್ಯ ಯೋಜನೆಗೆ ಮರು ಚಾಲನೆ ನೀಡಲಾಗುವುದು. ರಾಜ್ಯದಲ್ಲಿ ಕಬ್ಬು ಕಟಾವಿಗೆ ಅನುಕೂಲವಾಗುವಂತೆ 100 ಕೃಷಿ ಯಂತ್ರಧಾರೆ ಕೇಂದ್ರಗಳಿಗೆ ಅತ್ಯಾಧುನಿಕ ಕಬ್ಬು ಕಟಾವು ಯಂತ್ರಗಳನ್ನು ನೀಡಲಾಗುವುದು. ಸಿರಿಧಾನ್ಯ ಬೆಳೆಗೆ ಪ್ರೋತ್ಸಾಹವಾಗಿ ಹೆಕ್ಟರ್ಗೆ 10 ಸಾವಿರ ಧನವನ್ನು 2.5 ಹೆಕ್ಟೇರ್ ವರೆಗೂ ನೀಡಲಾಗುತ್ತಿದೆ. ಹೊಸ ಕೃಷಿ ಉತ್ಪಾದಕ ಸಂಘಗಳಿಗೆ ಶೇ.4 ರಬಡ್ಡಿ ದರದಲ್ಲಿ ಸಾಲ ನೀಡಲಾಗುತ್ತಿದೆ. ಹಳೆ ಸಂಘಗಳಿಗೆ ಬ್ಯಾಂಕುಗಳಲ್ಲಿ ರೂ. 50 ಲಕ್ಷದವರೆಗೆ ಸಾಲ ಪಡಿಯುವ ಅವಕಾಶ ನೀಡಲಾಗಿದೆ ಎಂದರು.

ಯೋಜನೆ ಮತ್ತು ಸಾಂಖ್ಯಿಕ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಸಂಶೋಧನಾ ಕೇಂದ್ರ ಪ್ರಾರಂಭವಾಗಿ 100 ವರ್ಷಗಳು ತುಂಬಿವೆ. ಈ ಕೇಂದ್ರದ ಸ್ಥಾಪನೆಗೆ ಕಾರಣೀಭೂತರಾದ ಎಲ್ಲರನ್ನೂ ಸ್ಮರಿಸುವುದು ಅಗತ್ಯ. 1913 ರಲ್ಲಿ ಈ ಭಾಗದ ಜನರು ಉದಾರ ಮನೋಭಾವದಿಂದ ಸಂಶೋಧನಾ ಕೇಂದ್ರಕ್ಕೆ ಜಮೀನು ನೀಡಿದ್ದಾರೆ. ಸಂಶೋಧನಾ ಕೇಂದ್ರದಿಂದ ಜಿಲ್ಲೆಯ ರೈತರ ಹೊಲಗಳಲ್ಲಿ ಬೆಳೆಗಳ ಕುರಿತು ಪ್ರಯೋಗ ಹಾಗೂ ಪ್ರಾತ್ಯಕ್ಷಿಕೆ ನಡೆಸಲಾಗುತ್ತದೆ. ಹಿರಿಯೂರಿನಲ್ಲಿ ತೋಟಗಾರಿಕೆ ಕಾಲೇಜು ಈಗಾಗಲೇ ಇದೆ. ಬಬ್ಬರೂ ಸಂಶೋಧನಾ ಕೇಂದ್ರದಲ್ಲಿಯೂ ಕೃಷಿ ಪದವಿ ಕಾಲೇಜು ಆರಂಭಿಸಬೇಕು. ಸಂಶೋಧನಾ ಕೇಂದ್ರದಲ್ಲಿ ಬೋಧನೆ, ಸಂಶೋಧನೆ, ವಿಸ್ತರಣೆ ಕಾರ್ಯ ನಡೆಯುತ್ತಿದೆ. ಇವುಗಳನ್ನು ಉನ್ನತೀಕರಣ ಗೊಳಿಸಲು ಸಹಕಾರ ನೀಡಬೇಕು. ಈ ಭಾಗದ ರೈತರ ಅನುಕೂಲಕ್ಕಾಗಿ ಮೈಸೂರು ಅರಸರ ಕಾಲದಲ್ಲಿ ಆರಂಭಿಸಿದ ವಾಣಿ ವಿಲಾಸ ಸಕ್ಕರೆ ಕಾರ್ಖಾನೆಯನ್ನು ಮರು ಪ್ರಾರಂಭಕ್ಕೆ ಅನುದಾನ ನೀಡಬೇಕು. ಹಿರಿಯರೂ ನಗರ ಅಭಿವೃದ್ಧಿ ರೂ.40 ಕೋಟಿ, ನಗರದಲ್ಲಿ ಹೈಟೆಕ್ ಬಸ್ ನಿರ್ಮಾಣ ಮಾಡಬೇಕು ಎಂದು ಮುಖ್ಯಮಂತ್ರಿಗಳಲ್ಲಿ ಕೋರಿದರು.

ಶಾಸಕ ಬಿ.ಜಿ.ಗೋವಿಂದ ಮಾತನಾಡಿ ಜಿಲ್ಲೆಯಲ್ಲಿ ಕಪ್ಪು ತಲೆ ಕಂಬಳಿ ಹುಳಿವಿನ ಬಾಧೆ ಯಿಂದ ತಂಗಿನ ತೋಟಗಳು ಹಾಳಾಗುತ್ತಿವೆ. ರೈತರಿಗೆ ನೆರವಿಗಾಗಿ ವಿಶೇಷ ಪ್ಯಾಕೇಜ್ ಘೋಷಿಸುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು. ಲೆಸ್ಲಿ ಕೋಲಂ ಶತಮಾನೋತ್ಸವ ಭವನದ ಶಂಕುಸ್ಥಾಪನೆ. ಕೃಷಿ ಯಂತ್ರೋಪಕರಣಗಳ ಪರೀಕ್ಷಾ ಕೇಂದ್ರ, ಶೇಂಗಾ ಸಂಸ್ಕರಣ ಘಟಕ, ವಿಷೇಶ ಅಂಚೆ ಲಕೋಟೆ ಹಾಗೂ ಭೂಪಟಗಳು, ಕೃಷಿ ಪ್ರಕಟಣೆಗಳನ್ನು ಬಿಡುಗಡೆ ಮಾಡಿದರು.

## ಫಾಸ್ಟ್ ನ್ಯೂಸ್

### ಬಿಜೆಪಿ ಸಮಾಜ ಒಡೆಯುವ ಕೆಲಸ ಮಾಡುತ್ತಿದ್ದರೆ, ಕಾಂಗ್ರೆಸ್ ಜೋಡಿಸುತ್ತಿದೆ: ಡಿಸಿಎಂ ಶಿವಕುಮಾರ್

» ಮೊದಲ ಪುಟದಿಂದ

ಎಸ್.ಎಂ. ಕೃಷ್ಣಅವರ ಕಾಲದಲ್ಲಿ ಕುವೆಂಪು ಅವರ ಜಯ ಭಾರತ ಜನನಿಯ ತನುಜಾತೆ ಹಾಡನ್ನು ನಾಡಗೀತೆಯಾಗಿ ಘೋಷಣೆ ಮಾಡಿದೆವು.ಈ ಹಾಡೇ ಕಾಂಗ್ರೆಸ್ ಪಕ್ಷ ಕರ್ನಾಟಕಕ್ಕೆ ನೀಡಿರುವ ಸಂದೇಶ." "ಕುವೆಂಪು ಅವರ ಸರ್ವಜನಾಂಗದ ಶಾಂತಿಯ ತೋಟ ನಿರ್ಮಾಣ ಮಾಡುವುದೇ ನಮ್ಮ ಗುರಿ ಹಾಗೂ ಉದ್ದೇಶ. ಬಿಜೆಪಿಯವರು ಸತ್ಯಶೋಧನ ಸಮಿತಿಯ ಮೂಲಕ ಅವರಿಗೆ ಏನು ಬೇಕೋ ಅದನ್ನು ಹೇಳುತ್ತಿದ್ದಾರೆ. ನಾವು ಸಮಾಜ ಜೋಡಿಸುತ್ತಿದ್ದರೆ, ಅವರು ಒಡೆಯುತ್ತಿದ್ದಾರೆ. ಇದೇ ಕಾಂಗ್ರೆಸ್ ಹಾಗೂ ಬಿಜೆಪಿಗೆ ಇರುವ ವ್ಯತ್ಯಾಸ ಎಂದರು. ಜಿಲ್ಲಾ ಉಸ್ತುವಾ ಸಚಿವರು ಹಿಂದೂ ಮತ್ತು ಮುಸ್ಲಿಂ ಇಬ್ಬರನ್ನೂ ಭೇಟಿ ಮಾಡಿ ಮಾತನಾಡಿದ್ದಾರೆ. ಅವರ ಸಮಸ್ಯೆ ಆಲಿಸಿದ್ದಾರೆ. ಯಾರು ತಪ್ಪು ಕೆಲಸ ಮಾಡಿದ್ದಾರೋ, ಅದನ್ನು ಖಂಡಿಸಿದ್ದಾರೆ, ಇಲ್ಲಿ ಯಾರನ್ನೂ ರಕ್ಷಣೆ ಮಾಡುವ ಪ್ರಮೇಯ ಬರುವುದೇ ಇಲ್ಲ. ಯಾರು ಕಾನೂನು ಮೀರಿ ತಪ್ಪು ಮಾಡಿದ್ದಾರೋ ಅವರಿಗೆ ಶಿಕ್ಷೆ ನೀಡುವ ಕೆಲಸ ಮಾಡುತ್ತೇವೆ. ಆದರೆ ಬಿಜೆಪಿಯವರು ಪಟ್ಟಿ ಇಟ್ಟುಕೊಂಡು ಕೆಲವರ ಮನೆಗೆ ಹೋಗಿದ್ದಾರೆ ಎಂದು ಆರೋಪಿಸಿದ ಶಿವಕುಮಾರ್,ನಾವು ನಿಜವಾದ ಹಿಂದುಗಳು, ಬಿಜೆಪಿಯವರು ನಕಲಿ ಹಿಂದುಗಳು ಎನ್ನುವ ಸಾರಿಗೆ ಸಚಿವರಾದ ರಾಮಲಿಂಗಾರೆಡ್ಡಿ ಅವರ ಮಾತಿಗೆ ಸಹಮತ ವ್ಯಕ್ತಪಡಿಸಿದರು.

### ದೂರು ಸಮಿತಿ ರಚನೆ

» ದಾವಣಗೆರೆ

ಮಹಿಳೆಯರು ಮಾಡುವ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಗಟ್ಟುವ ನಿಟ್ಟಿನಲ್ಲಿ ಆಂತರಿಕ ದೂರು ಸಮಿತಿ ರಚನೆ ಮಾಡಲಾಗಿದೆ. ಮಹಿಳೆಯರ ಮೇಲಾಗುವ ಲೈಂಗಿಕ ಕಿರುಕುಳ ತಡೆಗಟ್ಟುವ ಹಾಗೂ ನಿಷೇಧಿಸುವ ಉದ್ದೇಶದಿಂದ ಪ್ರತಿ 3 ವರ್ಷಗಳಿಗೊಮ್ಮೆ ಆಂತರಿಕ ದೂರು ಸಮಿತಿಯನ್ನು ಪುನರ್ ರಚಿಸಬೇಕಾಗಿರುತ್ತದೆ. ಜಿಲ್ಲೆಯಲ್ಲಿ 10 ಮತ್ತು 10 ಕ್ಕಿಂತ ಹೆಚ್ಚು ಮಹಿಳೆಯರು ಕಾರ್ಯನಿರ್ವಹಿಸುತ್ತಿರುವ ನೋಂದಾಯಿತ ಸಹಕಾರ ಸಂಘಗಳು ಹಾಗೂ ಸಂಘ-ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿಯನ್ನು ಕಡ್ಡಾಯವಾಗಿ ರಚನೆ ಮಾಡಬೇಕಾಗಿದ್ದು, ಆ ಸಮಿತಿಯಲ್ಲಿ ಒಬ್ಬರು ಅಧ್ಯಕ್ಷರು, ಮೂವರು ಸದಸ್ಯರು ಹಾಗೂ ಒಬ್ಬ ಸದಸ್ಯ ಕಾನೂನಿನ ಪರಿಣಿತರಾಗಿರಬೇಕು. ಎಲ್ಲಾ ಸಂಘ ಸಂಸ್ಥೆಗಳು ಆಂತರಿಕ ದೂರು ಸಮಿತಿಯನ್ನು ರಚಿಸಿ, ಸಮಿತಿ ಆದೇಶದ ಪ್ರತಿಯೊಂದಿಗೆ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿಗೆ ವರದಿ ಮಾಡಲು ಜಿಲ್ಲಾ ಸಂಘಗಳ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪನಿಬಂಧಕಿ ಹೆಚ್. ಅನ್ನಪೂರ್ಣ ತಿಳಿಸಿದ್ದಾರೆ.

### ಅವಧಿ ಮೀರಿದ ಕಡತಗಳ ವಿಲೇವಾರಿ

» ದಾವಣಗೆರೆ

ಜಿಲ್ಲಾಗ್ರಾಹಕರವ್ಯಾಜ್ಯಗಳಪರಿಹಾರಆಯೋಗದಿಂದ ಅವಧಿ ಮೀರಿದ ಗ್ರಾಹಕರ ವ್ಯಾಜ್ಯಗಳು, ಅಮಲ್ಜಾರಿ ಅರ್ಜಿಗಳು ಹಾಗೂ ಸಂಕೀರ್ಣ ಅರ್ಜಿಗಳ ಕಡತಗಳನ್ನು ನಿಯಮಾನುಸಾರ ನಾಶಗೊಳಿಸಲು ಸೂಚಿಸಲಾಗಿದೆ.ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿನ 2015 ರಿಂದ 2018ನೇ ಸಾಲಿನವರೆಗಿನ ವಿವಿಧ ಕಡತಗಳ ಮೂಲ ದಾಖಲೆಗಳನ್ನು ಈ ಸುತ್ತೋಲೆ ಹೊರಡಿಸಿದ ದಿನಾಂಕದಿಂದ 60 ದಿನಗಳ ಅವಧಿಯೊಳಗೆ ಗ್ರಾಹಕರು ಹಾಗೂ ವಕೀಲರು ಹಿಂಪಡೆಯಬೇಕು ಇಲ್ಲವಾದಲ್ಲಿ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಆದೇಶಾನುಸಾರ ಮೂಲ ಕಡತಗಳನ್ನು ವಿಲೇವಾರಿ ಮಾಡಲಾಗುವುದು ಎಂದು ಆಯೋಗದ ಅಧ್ಯಕ್ಷರು ಮಹಾತೇಶ್ ಈರಪ್ಪ ಶಿಗ್ಲಿ ತಿಳಿಸಿದ್ದಾರೆ

### ಕಿರು ಸಾಲ ಸೌಲಭ್ಯಕ್ಕಾಗಿ ಬೀದಿ ಬದಿ ವ್ಯಾಪಾರಿಗಳಿಂದ ಅರ್ಜಿ

» ದಾವಣಗೆರೆ

ಕೇಂದ್ರ ಸರ್ಕಾರದ ಆತ್ಮ ನಿರ್ಭರ್ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳು ವ್ಯಾಪಾರ ವಿಸ್ತರಿಸಿಕೊಳ್ಳಲು ಬ್ಯಾಂಕ್ ಮೂಲಕ ಕಡಿಮೆ ಬಡ್ಡಿ ದರದಲ್ಲಿ ಕಿರು ಸಾಲ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ.ಬೀದಿ ಬದಿ ವ್ಯಾಪಾರಿಗಳಿಗೆ ಹಾಗೂ ಹಾಲು ಮಾರಾಟಗಾರರಿಗೆ ಮತ್ತು ಪತ್ರಿಕಾ ವಿತರಕರಿಗೂ ಆರ್ಥಿಕ ಸುಭದ್ರತೆಗಾಗಿ 3 ಕಂತುಗಳಲ್ಲಿ ಸಾಲ ಸೌಲಭ್ಯವನ್ನು ಕಲ್ಪಿಸಲಾಗುವುದು. ಮೊದಲ ಕಂತಿನಲ್ಲಿ ರೂ 10,000 ಸಾಲ ನೀಡಿ 12 ತಿಂಗಳ ಅವಧಿಯಲ್ಲಿ ಸಾಲ ಮರು ಪಾವತಿ ಮಾಡಿದಲ್ಲಿ ರೂ 20,000 ಸಾಲ ನೀಡಲಾಗುವುದು. ಪಡೆದ ಸಾಲವನ್ನು 18 ತಿಂಗಳ ಅವಧಿಯಲ್ಲಿ ಸಾಲ ಮರು ಪಾವತಿ ಮಾಡಿದಲ್ಲಿ ರೂ 50,000 ಸಾಲ ಸೌಲಭ್ಯ ನೀಡಲಾಗುವುದು.ಸಾಲ ಸೌಲಭ್ಯದ ಜೊತೆಗೆ ಕ್ಯೂ ಆರ್ ಕೋಡ್ ಮಾಡಿಸಿಕೊಳ್ಳಬೇಕು, ನಗರ ಸ್ಥಳೀಯ ಸಂಸ್ಥೆಗಳಿಂದ ಕೈಗೊಳ್ಳಲಾಗುವ ಸಮೀಕ್ಷೆಗೊಳಗಾಗಿ ಸಾಮಾಜಿಕ ಭದ್ರತಾ ಯೋಜನೆಗಳ ಸೌಲಭ್ಯವನ್ನು ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಕಛೇರಿ ಸಮಯದಲ್ಲಿ ಸಂಬಂಧಪಟ್ಟ ಶಾಖೆಯಲ್ಲಿ ವಿಚಾರಿಸಬಹುದು.

# ಇಂದು ಜಿಲ್ಲೆಗೆ ಕೇಂದ್ರ ಬರ ಅಧ್ಯಯನ ತಂಡ

» ನಾಯಕನಹಟ್ಟಿ

ಕೇಂದ್ರ ಅಧ್ಯಾಯನ ತಂಡದ ಅಧಿಕಾರಿಗಳು 7ನೇ ತಾರೀಖು ಬರಲಿದ್ದು, ಗೊನೂರು, ಹಾಯ್ಕಲ್, ಬೋಸೆದೇವರಹಟ್ಟಿ, ರಾಮದುರ್ಗ, ಭಿಮಗೊಂಡನಹಳ್ಳಿ, ಗೌಡಗೆರೆ, ಗ್ರಾಮಗಳಿಗೆ ಕೇಂದ್ರ ಅಧ್ಯಾಯನ ತಂಡದ ಅಧಿಕಾರಿಗಳು ಬರಿಲಿದ್ದಾರೆ ಎಂದು ಜಂಟಿ ಕೃಷಿ ನಿರ್ದೇಶಕರಾದ ಮಂಜುನಾಥ ಹೇಳಿದರು.

ನಾಯಕನಹಟ್ಟಿ ಹೋಬಳಿಯ ರಾಮದುರ್ಗ ಗ್ರಾಮದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ತಂಡ ಬೇಟಿ ನೀಡಿ ನಂತರ ಮಾತನಾಡಿದ ಅವರು ಕೇಂದ್ರಬರ ಅಧ್ಯಾಯನತಂಡರಾಜ್ಯಕ್ಕೆಬರುವಉದ್ದೇಶ ರಾಜ್ಯದಲ್ಲಿ ಬರ ಪರಿಸ್ಥಿತಿ ಬಂದಿದಿಯ ಅಥವಾ ಯಾವ ಪ್ರಮಾಣದಲ್ಲಿ ಬಂದಿದೆ ಬೆಳೆ ಇಳುವಳಿ ಪ್ರಮಾಣ ಎಷ್ಟು ಖುಷಿ ಇದೆ ಎನ್ನುವುದನ್ನು ತಿಳಿಯಲು ಕೇಂದ್ರಬರ ಅಧ್ಯಾಯನ ಕೇಂದ್ರ ಬರುವುದು ಹಾಗೆ ರೈತರು ತೇವಾಂಶದ ಕೊರತೆಯಿಂದ ಈಗಾಗಲೇ ಬೆಳೆ ಕಟುವು ಮಾಡಿದ್ದಲ್ಲಿ ತೊಂದರೆ ಇಲ್ಲ. ನಮ್ಮ ಇಲಾಖೆಯ ಅಧಿಕಾರಿಗಳು ಬೆಳೆ ಸಮಿಕ್ಷೆಯನ್ನು ಮಾಡಿ ದಾಖಲಿಕರಣ ಮಾಡಿದ್ದಾರೆ. ಈ ದಾಖಲಿಕರಣದ ಅಧಾರದ ಮೇಲೆ ಸರ್ಕಾರ ನಿರ್ಧಾರ ತೆಗೆದುಕೊಳ್ಳುತ್ತದೆ





ಎಂದರು. ಬೀಜ ಗೊಬ್ಬರ ಬಿತ್ತನೆ ಮಾಡಿ ನಷ್ಟ ಆಗಿದ್ದರೆ, ಎನ್.ಡಿ.ಆರ್.ಎಫ್ ಮಾರ್ಗ ಸೂಚನೆಯಂತೆ ಒಣ ಬೇಸಾಯಕ್ಕೆ ಹೆಕ್ಟರ್‌ಗೆ 8,500/- ಬೇಸಾಯದ ಬೆಳೆಗಳಿಗೆ 17,000/-, ತೋಟಗಾರಿಕೆ ಬೆಳೆಗಳಿಗೆ 22,000/- ರೂಗಳು ನಿಗಧಿ ಪಡಿಸಲಾಗಿದೆ ಎಂದು ಹೇಳಿದರು. ಬೆಳೆಯ ಇಳುವರಿಯಿಂದ ನಷ್ಟ ಆದಂತವರಿಗೆ ಬೆಳೆ ವಿಮೆಯಿಂದ ಸರಿದೂಗಿಸುವುದು ಬೆಳೆ ವಿಮೆ ವ್ಯಾಪ್ತಿಗೆ ಬರುತ್ತದೆ. ಯಾರು ಬೆಳೆ ವಿಮೆಯನ್ನು ಕಟ್ಟಿರುತ್ತಾರೋ, ಅವರಿಗೆ ಬೆಳೆ ವಿಮೆ ಬರುತ್ತದೆ ಎಂದು ಚಿತ್ರದುರ್ಗ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಮಂಜುನಾಥ ರವರು ಮಾಧ್ಯಮಗಳೊಂದಿಗೆ ಮಾತನಾಡಿದರು.

ಈ ಸಂದರ್ಭದಲ್ಲಿ ಉಪಸ್ಥಿತರಾದ ಪ್ರಭಾಕರ್ ಉಪಕೃಷಿ ನಿರ್ದೇಶಕರು, ಆಶೋಕ ಸಹಾಯಕ ಕೃಷಿ ನಿರ್ದೇಶಕರು ಚಳ್ಳಕೆರೆ, ಸವಿತಾ ತೋಟಗಾರಿಕೆ ಉಪ ನಿರ್ದೇಶಕರು ಚಿತ್ರದುರ್ಗ, ಕಂದಾಯ ನಿರೀಕ್ಷಕರಾದ ಚೇತನ್ ಕುಮಾರ್, ನಾಯಕನಹಟ್ಟಿ ಹೇಮಂತ್‌ನಾಯಕ್ ಕೃಷಿ ಅಧಿಕಾರಿ ನಾಯಕನಹಟ್ಟಿ ರೈತ ಮುಖಂಡರು ಗ್ರಾಮಸ್ಥರು ಹಾಜರಿದ್ದರು.

### 25000 ರೂ. ಬೆಳೆ ನಷ್ಟ

ದಾಸರ ಬೋರಯ್ಯ ರೈತ ಮುಖಂಡರು ಮಾತನಾಡಿ ಬರದ ಭೂಮಿ ಎಂದು ಘೋಷಣೆಯಾಗಿದೆ. ನೀರಿಲ್ಲ ಬೆಳೆ ನಷ್ಟವಾಗಿದೆ. 20 ರಿಂದ 25 ಸಾವಿರ ರೂಗಳ ಈಗಿನ ಬೆಲೆಯ ಪರಿಸ್ಥಿತಿಯಲ್ಲಿ ಅಪಾರ ನಷ್ಟವಾಗಿದೆ. ಮೇವು ಆದರೂ ಕಾರಣಕ್ಕೆ ಮಾಡಬೇಕಾದ ಪರಿಸ್ಥಿತಿ ಬಂದಿದೆ. ಪರಿಹಾರ ದುಡ್ಡಿನಿಂದ ಮೇವು ಖರಿದಿಸಿ ಇಲ್ಲವಾದರೆ ಪ್ರಾಣ ಕಳೆದುಕೊಳ್ಳಬೇಕಾಗುತ್ತದೆ. ಅಂತ ಪರಿಸ್ಥಿತ ಕೂಡ ಬಂದಿದೆ. ಸರ್ಕಾರ ಶೀಘ್ರವಾಗಿ ಗೋ ಶಾಲೆಗಳನ್ನು ತೆರೆಯಬೇಕು ಎಂದು ಆಗ್ರಹಿಸಿದರು.

# ಪತ್ರಕರ್ತರ ಸಮ್ಮೇಳನದ ಯಶಸ್ಸಿಗೆ ಬದ್ಧರಾಗೋಣ

» ದಾವಣಗೆರೆ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ರಾಜ್ಯ ಸಂಘದ ವತಿಯಿಂದ ನಗರದಲ್ಲಿ ನಡೆಯಲಿರುವ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಯಶಸ್ಸಿಗೆ ಎಲ್ಲರೂ ಶ್ರಮಿಸುವ ನಿರ್ಧಾರ ಕೈಗೊಳ್ಳಲಾಯಿತು.

ಗುರುವಾರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಸಹಯೋಗದಲ್ಲಿ ಅಪೂರ್ವ ಹೋಟೇಲ್ ಸಭಾಂಗಣದಲ್ಲಿ ಕರೆಯಲಾಗಿದ್ದ ಸಭೆಯಲ್ಲಿ ಸಂಘದ ಜಿಲ್ಲಾಧ್ಯಕ್ಷ ಇ.ಎಂ. ಮಂಜುನಾಥ ಅಧ್ಯಕ್ಷತೆಯಲ್ಲಿ ಎಲ್ಲಾ ಪತ್ರಕರ್ತರು ತಮ್ಮತಮ್ಮ ಸಲಹೆಗಳನ್ನು ನೀಡುವ ಜೊತೆಗೆ ಸಮ್ಮೇಳನ ಯಶಸ್ಸಿಗೆ ಒಗ್ಗಟ್ಟಾಗಿ ಕಾರ್ಯನಿರ್ವಹಿಸುವ ನಿರ್ಧಾರ ಪ್ರಕಟಿಸಿದರು.

ಹಿರಿಯ ಪತ್ರಕರ್ತರಾದ ಬಿ.ಎನ್. ಮಲ್ಲೇಶ್, ಸಮ್ಮೇಳನ ನಡೆಸುವ ದಿನಾಂಕ ಮತ್ತು ಸ್ಥಳ ಬೇಗನೆ ಘೋಷಣೆ ಮಾಡಬೇಕು. ಈ ಕೆಲಸಗಳು ನಡೆದರೆ ಮುಂದಿನ ಎಲ್ಲಾ ಕಾರ್ಯಗಳು ಸುಗಮವಾಗಿ ನಡೆಯುತ್ತವೆ ಎಂದು ಸಲಹೆ ನೀಡಿದರು.

ಹಿರಿಯ ಪತ್ರಕರ್ತ ಬಾ.ಮ. ಬಸವರಾಜಯ್ಯ ಮಾತನಾಡಿ, ಸಮ್ಮೇಳನದ ವಿವಿಧ ಸಮಿತಿಗಳನ್ನು ರಚನೆ ಮಾಡುವಾಗ ನಗರದ ಗಣ್ಯ ವ್ಯಕ್ತಿಗಳನ್ನು ಸೇರಿಸಿಕೊಂಡು ಮಾಡಬೇಕಿದೆ. ಜಿಲ್ಲೆಯಲ್ಲಿ ಹಲವು ಮಠಗಳಿದ್ದು, ಶ್ರೀಗಳನ್ನು ಆಹ್ವಾನಿಸಿ, ದಾಸೋಹದಲ್ಲಿ ಅವರನ್ನು ತೊಡಗಿಸಿಕೊಳ್ಳಲು ಮನವಿ ಮಾಡುವಂತೆ ಹೇಳಿದರು.

ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಅಧ್ಯಕ್ಷ ಕೆ. ಏಕಾಂತಪ್ಪ ಮಾತನಾಡಿ, ದಾವಣಗೆರೆ ನಗರದಲ್ಲಿ ಸಮ್ಮೇಳನ ನಡೆಯುತ್ತಿರುವುದು ಸಂತೋಷದ ಸಂಗತಿ. ಎಲ್ಲರೂ ಒಟ್ಟಾಗಿ ಕೆಲಸ ಮಾಡಿ ಸಮ್ಮೇಳನದ ಯಶಸ್ಸಿಗೆ ಶ್ರಮಿಸೋಣ ಎಂದರು. ಇದೇ ವೇಳೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಅನಾರೋಗ್ಯದಿಂದ ಬಳಲುತ್ತಿರುವ ಪತ್ರಕರ್ತರಾದ ಜಿ.ಎಂ.ಆರ್. ಆರಾಧ್ಯ ಮತ್ತು ಚನ್ನಗಿರಿಯ ಅಣ್ಣೋಜಿ ರಾವ್ ಅವರಿಗೆ ಸಹಾಯಧನ ದ ಚೆಕ್‌ನ್ನು ವಿತರಣೆ ಮಾಡಲಾಯಿತು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಇ.ಎಂ. ಮಂಜುನಾಥ ಮಾತನಾಡಿ, ಈ ಸಮ್ಮೇಳನ ಪತ್ರಕರ್ತರ ಜಾತ್ರೆ. ಪತ್ರಕರ್ತರು ಮತ್ತು ಅವರ ಕುಟುಂಬ ವರ್ಗದವರು ಈ ಸಮ್ಮೇಳನವನ್ನು ಹಬ್ಬದ ರೀತಿಯಲ್ಲಿ ಆಚರಣೆ ಮಾಡೋಣ. ಎಲ್ಲರ ಸಹಕಾರ ಮುಖ್ಯವಾಗಿದೆ ಎಂದರು.

ಪ್ರಧಾನ ಕಾರ್ಯದರ್ಶಿ ಎ. ಫಕ್ರುದ್ದೀನ್, ಖಜಾಂಚಿ ಎನ್.ವಿ. ಬದರಿನಾಥ್, ರಾಷ್ಟ್ರೀಯ ಸಮಿತಿಸದಸ್ಯ ಎಸ್.ಕೆ. ಒಡೆಯರ್,ಕಾರ್ಯದರ್ಶಿ ಜೆ ಎಸ್ ವೀರೇಶ್ ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಖಜಾಂಚಿ ಮಧು ನಾಗರಾಜ್, ಪತ್ರಕರ್ತರಾದ ಮಲ್ಲಿಕಾರ್ಜುನ್ ಕಬ್ಬೂರು, ತಾರಾನಾಥ್, ಪಿ ಷಣ್ಮುಖ ಸ್ವಾಮಿ, ಜಿ.ಅರ್. ನಿಂಗೋಜಿ ರಾವ್, ಇಂದುಧರ್ ನಿಶಾನಿಮಠ್, ಹೆಚ್.ಎಂ ಪಿ ಕುಮಾರ್, ರವಿಬಾಬು, ಆರ್. ರವಿ,ರಂಗನಾಥ್ ರಾವ್ ಡಿ, ಕುಣೆಬೆಳೆಕರೆ ಸುರೇಶ್, ಮಂಜುನಾಥ, ವಿವೇಕಾನಂದ, ಸಿ. ವೇದಮೂರ್ತಿ, ಹೆಚ್. ಭಾರತಿ, ಸಿಕಂದರ್, ಆರ್.ಎಸ್. ತಿಪ್ಪೇಸ್ವಾಮಿ ಎಚ್ .ಎನ್ ಪ್ರಕಾಶ್ ಸಂಜಯ್ ಚಂದ್ರಶೇಶರ್. ಎಚ್, ಉಮೇಶ್ ಕೆ , ಶಿವಕುಮಾರ್ ಬಿ.ಎಸ್ ಮುದ್ದಯ್ಯ, ಎಂ.ಗುರುಮೂರ್ತಿ, ನಂದನ್ ಕುಮಾರ್ ಮತ್ತಿತರರಿದ್ದರು.



ವಿಭಾಗದ ಮಟ್ಟದ ದಸರಾ ಕ್ರೀಡಾಕೂಟ

# ಬಾಲ್ ಬ್ಯಾಡ್ಮಿಂಟನ್‌ನಲ್ಲಿ ಚಿತ್ರದುರ್ಗ ತಂಡ ಪ್ರಥಮ



» ಚಳ್ಳಕೆರೆ

ಬೆಂಗಳೂರು ವಿಭಾಗ ಮಟ್ಟದ ದಸರಾ ಕ್ರೀಡಾಕೂಟವನ್ನು ಚಿತ್ರದುರ್ಗದಲ್ಲಿ ಆಯೋಜಿಸಲಾಗಿದ್ದು, ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಚಿತ್ರದುರ್ಗ ತಂಡ ಪ್ರಥಮ ಸ್ಥಾನ ಗಳಿಸಿದ್ದು, ತಂಡದಲ್ಲಿದ್ದ ಚಳ್ಳಕೆರೆ ಆಟಗಾರರು ಉತ್ತಮ ಪ್ರದರ್ಶನ ನೀಡಿದ್ದಾರೆಂದು ಜಿಲ್ಲಾ ಬಾಲ್ ಬ್ಯಾಡ್ಮಿಂಟನ್ ಅಸೋಸಿಯೇಷನ್ ಅಧ್ಯಕ್ಷ ಶ್ರೀಧರ್ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿನೀಡಿ, ಬಾಲ್ ಬ್ಯಾಡ್ಮಿಂಟನ್ ಸ್ಪರ್ಧೆಯಲ್ಲಿ ತುಮಕೂರು ಮತ್ತು ಚಿತ್ರದುರ್ಗ ಜಿಲ್ಲಾ ತಂಡಗಳಿಗೆ ಬಾರಿ ಸ್ಪರ್ಧೆ ಏರ್ಪಡಿಸಿದ್ದು, ಅಂತಿಮವಾಗಿ ಚಿತ್ರದುರ್ಗ ಬಾಲ್ ಬ್ಯಾಡ್ಮಿಂಟನ್ ತಂಡ ಮೇಲುಗೈ ಸಾಧಿಸಿ ಪ್ರಥಮ ಸ್ಥಾನ ಗಳಿಸಿದೆ. ತುಮಕೂರು ತಂಡ ಎರಡನೇ ಸ್ಥಾನಕ್ಕೆ ತೃಪ್ತಿಪಟ್ಟುಕೊಳ್ಳಬೇಕಾಯಿತು. ಉತ್ತಮ ಆಟ ಪ್ರದರ್ಶಿಸಿದ ಎಲ್ಲಾ ಆಟಗಾರರನ್ನು ಜಿಲ್ಲೆಯ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು.

ಅಸೋಸಿಯೇಷನ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಸ್.ಶ್ರೀರಾಮನಾಯಕ, ವಾಲಿಬಾಲ್ ತರಬೇತಿದಾರ ಮುಜೀಬುಲ್ಲಾ ಮತ್ತು ತಂಡದ ಆಟಗಾರರು ಉಪಸ್ಥಿತರಿದ್ದರು.

### ದಸರಾ: ಕನ್ನಡ ಪುಸ್ತಕ ಮಾರಾಟ ಮೇಳ

» ದಾವಣಗೆರೆ

ಮೈಸೂರು ದಸರಾ ಉತ್ಸವ-2023ರಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ದಸರಾ ಉತ್ಸವ ಸಮಿತಿ, ಮೈಸೂರು ಇವರ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 15 ರಿಂದ 23 ರವರೆಗೆ ಓವಲ್ ಗ್ರೌಂಡ್, ಹಳೆಯ ಡಿ.ಸಿ. ಆಫೀಸ್ ಪಕ್ಕ, ಮೈಸೂರು ಇಲ್ಲಿ ಪುಸ್ತಕ ಮಾರಾಟ ಮೇಳ ಏರ್ಪಡಿಸಲಾಗುವುದು. ಮೇಳದಲ್ಲಿ ಕನ್ನಡ ಪ್ರಕಾಶಕರು, ಮಾರಾಟಗಾರರು ಭಾಗವಹಿಸಬಹುದು..

ಮಳಿಗೆಯೊಂದಕ್ಕೆ ರೂ.1,000 ಗಳ ಭದ್ರತಾ ಠೇವಣಿ ಪಾವತಿಸಬೇಕು. ಆಸಕ್ತರು ನಿಗದಿತ ಅರ್ಜಿ ನಮೂನೆಯನ್ನು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರಿನ ಕಛೇರಿ ಅಥವಾ ಆಯಾ ಆಯಾ ಜಿಲ್ಲೆಯಲ್ಲಿರುವ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಛೇರಿಗಳಲ್ಲಿ ಪಡೆಯಬಹುದು ಅಥವಾ ವೆಬ್‌ಸೈಟ್ https:// kpp.karnataka.gov.in ನಲ್ಲಿ ಪಡೆದು, ಭರ್ತಿಮಾಡಿದ ಅರ್ಜಿಯನ್ನು ಭದ್ರತಾ ಠೇವಣಿ ಡಿ.ಡಿ.ಯೊಂದಿಗೆ ಅ.12 ರೊಳಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು ಹೆಸರಿಗೆ ಅಂಚೆಯ ಮೂಲಕ ಹಾಗೂ ಇ-ಮೇಲ್ ವಿಳಾಸ kannadappradhikara@gmail.com ಮೂಲಕ ಸಲ್ಲಿಸಬೇಕು ಮೇಳದಲ್ಲಿ ನಿರ್ಮಿಸಲಾಗುವ 60 ಮಳಿಗೆ ಆದ್ಯತೆಯ ಮೇರೆಗೆ ಹಂಚಿಕೆ ಮಾಡಲಾಗುವುದು.

## ಪ್ರಮುಖ ಸುದ್ದಿ

# ಹೈನೋದ್ಯಮದಲ್ಲಿ ಹೆಚ್ಚು ಸ್ಪರ್ಧೆ ಎದುರಿಸಬೇಕಾದರೆ ಹಾಲಿನ ಗುಣಮಟ್ಟ, ಉತ್ಪನ್ನ ಹೆಚ್ಚು ಮಾಡಬೇಕು: ಶೇಖರ್

» ಚಿತ್ರದುರ್ಗ

ಇವತ್ತಿನ ದಿವಸ ಪ್ರತಿಯೊಂದು ಕ್ಷೇತ್ರದಲ್ಲೂ ಕೂಡ ಪೈಪೋಟಿಯನ್ನು ಎದುರಿಸಬೇಕಾದ ಸಂದರ್ಭದಲ್ಲಿ ಯಾವುದೇ ಒಂದು ಕ್ಷೇತ್ರದಲ್ಲಿಯಾಗಲೀ ಉದಾರೀಕರಣ, ಖಾಸಗೀಕರಣ ಮತ್ತು ಮುಕ್ತ ಮಾರುಕಟ್ಟೆ ವ್ಯವಸ್ಥೆಯಲ್ಲಿ ನಮ್ಮ ಹೈನೋದ್ಯಮದಲ್ಲಿ ಹೆಚ್ಚು ಸ್ಪರ್ಧೆಯನ್ನು ಎದುರಿಸಬೇಕಾದರೆ ಹಾಲಿನ ಗುಣಮಟ್ಟ, ಹೆಚ್ಚು ಹಾಲಿನ ಉತ್ಪನ್ನ ಮಾಡಬೇಕಾಗಿದೆ ಎಂದು ಶಿವಮೊಗ್ಗ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಎಸ್.ಜಿ.ಶೇಖರ್ ತಿಳಿಸಿದರು.

ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಹಾಗೂ ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ನಿ., ಚಿತ್ರದುರ್ಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ನಗರದ ಬಿ.ಎಲ್.ಗೌಡ ಲೇಔಟ್, ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ನಿ.ಸಹಕಾರ ಭವನ ಹಮ್ಮಿಕೊಳ್ಳಲಾಗಿದ್ದ ಚಿತ್ರದುರ್ಗ ಹಾಗೂ ಹಿರಿಯೂರು ತಾಲ್ಲೂಕುಗಳಲ್ಲಿ ಬರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.



ನಮ್ಮ ರಾಜ್ಯದಲ್ಲಿ ಶಿವಮೊಗ್ಗ ಹಾಲು ಒಕ್ಕೂಟವು ಕಳೆದ ತಿಂಗಳು 23 ರಂದು 7 ಲಕ್ಷ 802 ಕೆ.ಜಿ ಹಾಲು ಶೇಖರಣೆ ಹಾಲು ಉತ್ಪಾದನೆಯ ದಾಖಲೆ ಮಾಡಿದೆ ರಾಜ್ಯದಲ್ಲಿ 15 ಒಕ್ಕೂಟಗಳಲ್ಲಿ ಶಿವಮೊಗ್ಗ ಹಾಲು ಒಕ್ಕೂಟಗಳಲ್ಲಿ ಅತ್ಯುತ್ತಮ ಹಾಲಿನ ಗುಣಮಟ್ಟ ಹೊಂದಿದೆ. 98.53 ಹಾಲಿನ ಗುಣಮಟ್ಟ ಹೊಂದಿದ್ದು, ರಾಜ್ಯದಲ್ಲಿ ಮುಂಚೂಣಿಯಲ್ಲಿದೆ. ಅತೀ ಹೆಚ್ಚು ದರವನ್ನು ಕೊಡುತ್ತಿರುವ, ರಾಜ್ಯದ 15 ಹಾಲು ಒಕ್ಕೂಟಗಳಲ್ಲಿ ಶಿವಮೊಗ್ಗ ಹಾಲು ಒಕ್ಕೂಟ ಸ್ಪರ್ಧಾತ್ಮಕವಾದ ದರವನ್ನು ಕೊಡುತ್ತಿದೆ. ಈ ಸಾಧನೆಗೆ ನಮ್ಮ ಸೇವೆ ಬಹಳ ಮುಖ್ಯ ಎಂದು ತಿಳಿಸಿದರು. ನಮ್ಮ ನಂದಿನಿ ಬಾಂಡ್ ದೇಶದಲ್ಲಿಯೇ 2ನೇ ಸ್ಥಾನದಲ್ಲಿದೆ. 20 ಸಾವಿರ ಕೋಟಿ ವಹಿವಾಟು ಮಾಡುತ್ತಿದೆ ಎಂದು ತಿಳಿಸಿ ಇದೇ ರೀತಿ ಸಹಕಾರ ಸಂಘಗಳಲ್ಲಿ ತಿದ್ದುಪಡಿಯಾದ ಕಾನೂನುಗಳ ಬಗ್ಗೆ, ಚುನಾವಣೆ ನಡೆಸುವ ಬಗ್ಗೆ ಹಾಲು ಉತ್ಪಾದಕರ ತಿಳುವಳಿಕೆ ಪಡೆಯುವುದು ಬಹಳ ಮುಖ್ಯವಾಗಿದೆ ಎಂದು ತಿಳಿಸಿದರು.

ತರಬೇತಿ ಶಿಬಿರವನ್ನು ಉದ್ಘಾಟಿಸಿದ ಕರ್ನಾಟಕರಾಜ್ಯಸಹಕಾರಮಹಾಮಂಡಳ ನಿ., ಬೆಂಗಳೂರು ಹಾಗೂ ನಿರ್ದೇಶಕರು, ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ಇದರ ನಿರ್ದೇಶಕರು, ಆರ್ ರಾಮರೆಡ್ಡಿ, ಸಂಘಗಳ ಕಾರ್ಯದರ್ಶಿಗಳು ಲಾಭದಲ್ಲಿರುವ ಸಂಘಗಳಿಂದ ಸಹಕಾರ ಶಿಕ್ಷಣ ನಿಧಿಯನ್ನು ನೀಡಬೇಕು, ಶಿಕ್ಷಣ ನಿಧಿ ನೀಡಿದರೆ ಇನ್ನೂ ಹೆಚ್ಚು ಹೆಚ್ಚು ಕಾರ್ಯಕ್ರಮಗಳನ್ನು ಏರ್ಪಡಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಯೂನಿಯನ್ನಿನ ಉಪಾಧ್ಯಕ್ಷರಾದ ಮಾತೃಶ್ರೀ ಎನ್, ಮಂಜುನಾಥ್ ಮಾತನಾಡಿ ರೈತರಿಗೆ ಹೆಚ್ಚು ಪ್ರೋತ್ಸಾಹ ನೀಡಬೇಕು ಹಾಲು ಉತ್ಪಾದನೆಗೆ ತಾವುಗಳು ಕಾಳಜಿ ವಹಿಸಿ ಶ್ರಮಪಟ್ಟು ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದರು.

ಸಹಕಾರ ರತ್ನ ಪುರಸ್ಕೃತರು ಹಾಗೂ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಜಿಂಕಲು ಬಸವರಾಜ್, ಮಾತನಾಡಿ ಸಹಕಾರ ಕ್ಷೇತ್ರದಲ್ಲಿ ಸಹಕಾರ ತತ್ವಗಳನ್ನು ಅಳವಡಿಸಿಕೊಂಡು ಗ್ರಾಮೀಣ ಬದುಕನ್ನು ಉತ್ತಮವಾಗಿ ಬದಲಾವಣೆಗೊಳಿಸುತ್ತಿರುವುದರಲ್ಲಿ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘಗಳು ಇದೇ ರೀತಿ ಯಾವುದೇ ಲೋಪದೋಷವಾಗದ ರೀತಿಯಲ್ಲಿ ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಯೂನಿಯನ್ನಿನ ಅಧ್ಯಕ್ಷರಾದ ಜೆ.ಶಿವಪ್ರಕಾಶ್ ನಮ್ಮ ಯೂನಿಯನ್ ಇಂತಹ ತರಬೇತಿಗಳನ್ನು ನಿರಂತರವಾಗಿ ನೀಡುತ್ತದೆ. ತಾವು ತಮ್ಮ ಸಂಘದ ಲಾಭದಲ್ಲಿ ನಮ್ಮ ಯೂನಿಯನ್‌ಗೆ ನೀಡುವ 2 % ಸಹಕಾರ ಶಿಕ್ಷಣ ನಿಧಿಯು ಸದುಪಯೋಗವಾಗಬೇಕೆಂದರೆ, ಸಹಕಾರ ಸಂಘಗಳು ಇನ್ನೂ ಹೆಚ್ಚು ಅಭಿವೃದ್ಧಿ ಹೊಂದಬೇಕಾದರೆ ಇಂತಹ ತರಬೇತಿಗಳಲ್ಲಿ ಭಾಗವಹಿಸಿ, ಇಂತಹ ವಿಚಾರಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.ಈ ಕಾರ್ಯಕ್ರಮದಲ್ಲಿ ಶಿವಮೊಗ್ಗ ಹಾಲು ಒಕ್ಕೂಟದ ವ್ಯವಸ್ಥಾಪಕರಾದ ಎಸ್.ಎಂ.ಮೂರ್ತಿ, ಶಿವಮೊಗ್ಗ ಹಾಲು ಒಕ್ಕೂಟದ ಉಪ ವ್ಯವಸ್ಥಾಪಕರಾದ ಕೆ.ಪಿ.ಸಂಜಯ್, ಶಿವಮೊಗ್ಗ ಹಾಲು ಒಕ್ಕೂಟದ ವಿಸ್ತರಣಾಧಿಕಾರಿಗಳಾದ ವಿನೂತ್ ಕುಮಾರ್, ರವಿಚಂದ್ರ ಜಿ., ನಯಾಜ್ ಬೇಗ್ ಎಸ್. ವೇದಿಕೆಯ ಮೇಲೆ ಉಪಸ್ಥಿತರಿದ್ದರು.ಈ ತರಬೇತಿಗೆ' ಉಪನ್ಯಾಸಕರಾಗಿ ವಿ.ಜಿ.ಕುಲಕರ್ಣಿ, ಸಹಕಾರ ಅಭಿವೃದ್ಧಿ ಅಧಿಕಾರಿಗಳು, ಧಾರವಾಡ, ಇವರು ಸಹಕಾರ ಸಂಘಗಳಲ್ಲಿ ಇತ್ತೀಚೆಗೆ ತಿದ್ದುಪಡಿಯಾದ ಕಾಯ್ದೆ, ಕಾನೂನು ಮುಖ್ಯಾಂಶಗಳು, ಸಹಕಾರ ಸಂಘಗಳಲ್ಲಿ ಸಭೆಯನ್ನು ನಡೆಸುವ ವಿಧಾನಗಳುಮತ್ತುಚುನಾವಣೆಜರುಗಿಸುವ ಕುರಿತು ಹಾಗೂ ಸಹಕಾರ ಸಂಘಗಳಲ್ಲಿ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರಗಳ ನಿರ್ವಹಣೆ ಕುರಿತು ಉಪನ್ಯಾಸ ನೀಡಿದರು. ರೈತಗೀತೆಯೊಂದಿಗೆ ಕಾರ್ಯಕ್ರಮವು ಪ್ರಾರಂಭಗೊಂಡು, ಜಿಲ್ಲಾ ಸಹಕಾರ ಶಿಕ್ಷಕ ನಾಗರಾಜ್ ಪಾಟೀಲ್, ಕಾರ್ಯಕ್ರಮ ನಿರೂಪಿಸಿ ಸ್ವಾಗತಿಸಿ ವಂದಿಸಿದರು.

## ಫಾಸ್ಟ್ ನ್ಯೂಸ್

### ಇಂದು ಉಚಿತ ನೇತ್ರ ತಪಾಸಣ ಶಿಬಿರ

» **ಚಿತ್ರದುರ್ಗ**

ಶ್ರೀ ಕಂಚಿ ಕಾಮಕೋಟಿ ಮೆಡಿಕಲ್ ಟ್ರಸ್ಟ್ ಶಂಕರ್ ಕಣ್ಣಿನ ಆಸ್ಪತ್ರೆ ಶಿವಮೊಗ್ಗ, ವಿಶ್ವ ಮಾನವ ಸಾಂಸ್ಕೃತಿಕ ಮತ್ತು ವಿದ್ಯಾ ಸಂಸ್ಥೆ ಸಿಬಾರ ಗುತ್ತಿನಾಡು, ರೋಟರಿ ಕ್ಲಬ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಜಿಲ್ಲಾ ಅಂಧತ್ವ ನಿಯಂತ್ರಣಾ ಕಾರ್ಯಕ್ರಮದಡಿಯಲ್ಲಿ ಆ. 8 ರ ಭಾನುವಾರ ಉಚಿತ ನೇತ್ರ ತಪಾಸಣಾ ಮತ್ತು ಶಸ್ತ್ರ ಚಿಕಿತ್ಸಾ ಶಿಬಿರ ಕಣ್ಣಿನ ಇತರೆ ತೊಂದರೆಗಳಿಗೆ ಚಿಕಿತ್ಸೆಯನ್ನು ಬೆಳಿಗ್ಗೆ 9 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ವಿಶ್ವ ಮಾನವ ಸಾಂಸ್ಕೃತಿಕ ಮತ್ತು ವಿದ್ಯಾ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಶಿಬಿರಕ್ಕೆ ಬರುವವರು ಕಡ್ಡಾಯವಾಗಿ ಇತ್ತಿಚಿನ 2 ಫೋಟೋ ಹಾಗೂ 2 ರೇಷನ್ ಕಾರ್ಡ, ಮತದಾನ ಚೀಟಿ ಜೆರಾಕ್ಸ್ ಪ್ರತಿಯನ್ನು ತರಬೇಕು ಹಾಗೂ ದೂರವಾಣಿ ಸಂಖ್ಯೆ ಮತ್ತು ಮೊಬೈಲ್ ಸಂಖ್ಯೆಗಳನ್ನು ತರಬೇಕುನ ಇದರೊಂದಿಗೆ ಕಡ್ಡಾಯವಾಗಿ ಜೊತೆಗಾರರನ್ನು ಕರೆ ತರಬೇಕೆಂದು ಸಂಘಟಕರು ಮನವಿ ಮಾಡಿದ್ದಾರೆ.

### ಆರ್ಥಿಕ ಸದೃಢತೆಗೆ ಸಹಕರಿಸುತ್ತಿರುವ ವಿರೇಂದ್ರ ಹೆಗ್ಗಡೆ ಅವರ ಸೇವೆ ಶ್ಲಾಘನೀಯ:ಪ್ರದೀಪ್



» **ಹೊಸದುರ್ಗ**

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಪ್ರತಿ ಗ್ರಾಮಮಟ್ಟದಲ್ಲಿ ಮಹಿಳೆಯರ ಮೂಲಕ ಸಂಘ ರಚಿಸಲಾಗಿದೆ. ಅಲ್ಲಿ ಅವರಿಗೆ ಆರ್ಥಿಕ ಸಹಾಯ ಮಾಡುವುದರ ಜೊತೆಗೆ ತರಬೇತಿಯನ್ನು ಸಹ ನೀಡುತ್ತಿದ್ದು, ಅವರ ಆರ್ಥಿಕ ಸದೃಢತೆಗೆ ಸಹಕರಿಸುತ್ತಿರುವ ವಿರೇಂದ್ರ ಹೆಗ್ಗಡೆ ಅವರ ಸೇವೆ ಶ್ಲಾಘನೀಯ ಎಂದು ಉದ್ಯಮಿ, ಸದ್ಗುರು ಆಯುರ್ವೇದಿಕ್ ಉತ್ಪನ್ನಗಳ ಮಾಲೀಕ ಡಿ.ಎಸ್ ಪ್ರದೀಪ್ ಹೇಳಿದರು.ಪಟ್ಟಣದ ರಾಧಾಕೃಷ್ಣ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಹೊಸದುರ್ಗ ತಾಲ್ಲೂಕು ಹಾಗೂ ಹಾಲು ರಾಮೇಶ್ವರ ಯೋಜನಾ ಕಚೇರಿ, ಜಿಲ್ಲಾ ಜನಜಾಗೃತಿ ವೇದಿಕೆ, ಪ್ರಗತಿ ಬಂಧು ಸ್ವಸಹಾಯ ಸಂಘಗಳ ಒಕ್ಕೂಟದ ವತಿಯಿಂದ ಗಾಂಧಿ ಸ್ಮರಣೆ ಮತ್ತು ದುಶ್ಚಟಗಳ ವಿರುದ್ಧ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವ್ಯಸನಕ್ಕೆ ತುತ್ತಾದವರು ಕುಟುಂಬದ ಜೊತೆಗೆ ದೇಶಕ್ಕೂ ಮಾರಕವಾಗಿರುತ್ತಾರೆ. ವ್ಯಸನ ಮುಕ್ತರನ್ನಾಗಿಸಲು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವಿವಿಧ ಕಾರ್ಯಕ್ರಮಗಳನ್ನು ರೂಪಿಸಿ, ತರಬೇತಿ ನೀಡುತ್ತಿದ್ದು, ಸದೃಢ ಸಮಾಜ ನಿರ್ಮಾಣಕ್ಕೆ ಸಹಕರಿಸುತ್ತಿದ್ದಾರೆ ಎಂದರು.ಮುಖಂಡ ಆಗ್ರೋ ಹೆಚ್.ಶಿವಣ್ಣ, ಹಿರಿಯ ಗಾಂಧಿವಾದಿ, ನಿವೃತ್ತ ಶಿಕ್ಷಕ ಶಿವಲಿಂಗಸ್ವಾಮಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಮದ್ಯಮುಕ್ತ ಬದುಕ ಕಟ್ಟಿಕೊಂಡ ನವ ಜೀವನ ಸೃಷ್ಟಿ ಸದಸ್ಯರನ್ನ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಬಿ.ಪಿ ಓಂಕಾರಪ್ಪ, ಇ.ವಿ ಅಜ್ಜಪ್ಪ, ಆಗ್ರೋ ಶಿವಣ್ಣ, ಜನಜಾಗೃತಿ ವೇದಿಕೆ ಸದಸ್ಯರಾದ ಬೋರೇಶ್, ಶ್ರೀ ಧರ್ಮಸ್ಥಳ ಸಂಸ್ಥೆ ಯೋಜನಾಧಿಕಾರಿ ಚಂದ್ರಶೇಖರ್, ಶಿವಣ್ಣ, ಸ್ಥೆರಿದಂತೆ ಧರ್ಮಸ್ಥಳ ಸಂಸ್ಥೆಯ ಮಹಿಳಾ ಕಾರ್ಯಕರ್ತರು ಭಾಗವಹಿಸಿದ್ದರು

### ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ ಪ್ರಶಸ್ತಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ 2023-24ನೇ ಸಾಲಿನಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಾಲೆಗಳಲ್ಲಿ 15 ವರ್ಷಗಳಿಗೂ ಮೇಲ್ಪಟ್ಟ ಸೇವೆ ಸಲ್ಲಿಸಿರುವ ಹಾಗೂ ಸೇವೆಯಲ್ಲಿರುವ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ನಿಗಧಿತ ನಮೂನೆಗಳನ್ನು ಇಲಾಖೆಯ ವೆಬ್‍ಸೈಟ್ WWW.dwdsc.kar.nic.in ಮೂಲಕ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಅಕ್ಟೋಬರ್ 25 ರೊಳಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾ ಇಲಾಖೆ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.08192-263936 ಹಾಗೂ ಜಿಲ್ಲಾ ವಿಕಲಚೇತನರ ಸಹಾಯವಾಣಿ ದೂ 08192-263939ಗೆ ಸಂಪರ್ಕಿಸಬಹುದೆಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ. ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

# ಗುರಿ ಮರೆತವರು ಏನನ್ನು ಸಾಧಿಸಲಾರರು

» **ಚಿತ್ರದುರ್ಗ**

ಗುರು ಮತ್ತು ಗುರಿಯನ್ನು ಮರೆತವರು ಏನನ್ನು ಸಾಧಿಸಲಾರರು ಎಂದು ಕಬೀರಾನಂದ ಆಶ್ರಮದ ಪೀಠಾಧಿಪತಿ ಶ್ರೀ ಶಿವಲಿಂಗಾನಂದ ಸ್ವಾಮೀಜಿ ತಿಳಿಸಿದರು.

ಚಿತ್ರದುರ್ಗ ತಾಲ್ಲೂಕಿನ ಸಜ್ಜನಕೆರೆ ಗ್ರಾಮದಲ್ಲಿ ನಡೆದ ಬುಡೇನ್ ಸಾಬ್ ಶ್ರೀಗಳ ಗುರುವಂದನಾ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ನಾವು ಆಸ್ಪತ್ರೆಗೆ ಹೋದಾಗ ವೈದ್ಯರ ಬಳಿ ನಮ್ಮ ಸಂಕಷ್ಟಕ್ಕೆ ಔಶಧಿ ಪಡೆಯುವಾಗ ಹಣ ನೀಡುತ್ತೇವೆ.ಅವರು ನಮಗೆ ಅಗತ್ಯ ಚಿಕಿತ್ಸೆ ನೀಡುತ್ತಾರೆ ಹೊರೆತು ಅವರಿಗೆ ವಂದನೆ ಸಲ್ಲಿಸಲ್ಲ.ಶಾಲೆಯಲ್ಲಿ ಪಾಠಹೇಳಿದ ಗುರುಗಳ ಸಹಕಾರದಿಂದ ಉನ್ನತ ಸ್ಥಾನಗಳಿಗೆ ತೆರಳುವವರು ಸಹ ಗುರುವಂದನೆ ಸಲ್ಲಿಸಲು ಮರೆಯುತ್ತಾರೆ. ಆದರೆ ಉಪಕಾರವನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯವಾಗಬೇಕಿದೆ.ಆಗ ನಮ್ಮ ಜನ್ಮ ಸಾರ್ಥಕವಾಗಲಿದೆ. ಅಂತಹ ಕೆಲಸವನ್ನು ಮಾಡುವುದನ್ನು ಅನೇಕರು ಮರೆಯುತ್ತಾರೆ.

ಆದರೆ ಸೇವಾ ಭಾವದಿಂದ ಸೇವೆ ಮಾಡಿದಾಗ,ಮತ್ತೊಬ್ಬರ ಸಂಕಷ್ಟ ಪರಿಹಾರಕ್ಕೆ ನಿಸ್ವಾರ್ಥದಿಂದ ಶ್ರಮಿಸಿದಾಗ ಮಾತ್ರಇಂತಹಗುರುವಂದನೆಲಭಿಸಲಿದೆ.ಆ ಕಾರ್ಯವನ್ನು ಬುಡೇನ್ ಸಾಬ್ ಸ್ವಾಮೀಜಿ ಮಾಡ್ತಾ ಬಂದಿದ್ದಾರೆ.ಹೀಗಾಗಿ ಅವರ ಅಪಾರ ಭಕ್ತವೃಂದದ ಸಮ್ಮುಖದಲ್ಲಿ ಬುಡೇನ್ ಸಾಬ್ ಅವರಿಗೆ ಗುರುವಂದನೆ ಲಭಿಸಿದೆ.ಯಾವ್ದೇ ಮಾಠ,ಮಂತ್ರ ಹಾಗು ಕಟ್ಟುಪಾಡುಗಳಿಲ್ಲದೇ ಅವರ ದಿವ್ಯಜ್ಞಾನ ಹಾಗು ವೀಭೂತಿಯ ಮಹಿಮೆಯಿಂದ ಲಕ್ಷಾಂತರ ಜನಭಕ್ತರ ಸಂಕಷ್ಟಕ್ಕೆ ನಿಸ್ವಾರ್ಥದ ಪರಿಹಾರ ಹೇಳುವ ಸಂತ ಬುಡೇನ್ ಸಾಬ್ ಅವರಿಗೆ ಗುರುವಂದನೆ ಸಲ್ಲಿಸಿರೋದು ಅರ್ಥಪೂರ್ಣ ಎನಿಸಿದೆ ಎಂದರು.




ಇನ್ನು ಬುಡೇನ್ ಸಾಬ್ ಅವರು,ಇಸ್ಲಾಂ ಧರ್ಮದಲ್ಲಿ ಹುಟ್ಟಿ,ಹಿಂದು ಪರಂಪರೆಯ ಬಸವೇಶ್ವರರನ್ನು ಆರಾಧಿಸುತ್ತಿದ್ದಾರೆ.ಜಾತಿ ಧರ್ಮಗಳನ್ನು ಮೆಟ್ಟಿ,ನಿಂತಿದ್ದಾರೆ.ಇಲ್ಲಿ ವ್ಯಕ್ತಿ ಮುಖ್ಯವಲ್ಲ,ತತ್ವ ಮುಖ್ಯ ಎನಿಸಿದೆ.ಸಂತ ಶಿಶುನಾಳ ಶರೀಫರ ಆದರ್ಶಗಳನ್ನು ಬುಡೇನ್ ಸಾಬ್ ಮೈಗೂಡಿಸಿಕೊಂಡಿದ್ದು, ಅವರಲ್ಲಿಗೆ ಬರುವ ಭಕ್ತರನ್ನು ಸನ್ಮಾರ್ಗದಲ್ಲಿ ಸಾಗಿಸುತ್ತಿದ್ದಾರೆ. ಕ್ರೌರ್ಯ,ದುಶ್ಚಟಗಳ ದಾಸರಾದವರಿಗೆ ಗುರುಗಳ ತತ್ವಭೋಧನೆ ಮೂಲಕ ಮನಪರಿವರ್ತಿಸಿ ಸಾತ್ವಿಕ ನೆಲೆಗೆ ಕೊಂಡೊಯ್ಯುತಿದ್ದಾರೆ.

ವೈದ್ಯಕೀಯ ಲೋಕಕ್ಕೆ ಸವಾಲೆನಿಸಿದ್ದ ಅನೇಕರ ರೋಗರುಜಿನಗಳು ಮತ್ತು ಸಂಕಷ್ಟಗಳಿಗೆ ವೀಭೂತಿಯಿಂದಲೇ ಪರಿಹಾರ ಕಲ್ಪಿಸಿರುವ ಸಂತ ಬುಡೇನ್ ಸಾಬ್ ಈ ಭಾಗದ ಒಂದು ಶಕ್ತಿ ಎನಿಸಿದ್ದಾರೆ.ಇಂತಹ ಯುಗದಲ್ಲಿ ನಿಸ್ವಾರ್ಥದಿಂದ ಸೇವೆ ಮಾಡುತ್ತಾ ಸರಳತೆಯನ್ನು ಮೈಗೂಡಿಸಿಕೊಂಡಿರುವ ಸಂತ ನಿಮ್ಮೊಂದಿಗೆಇರೋದು ನಮ್ಮೆಲ್ಲರ ಪುಣ್ಯ ಎನಿಸಿದೆ.ಇವರಿಗೆ ದೇವರು ಆಯುರ್ ಆರೋಗ್ಯ ಕೊಟ್ಟು,ಇನ್ನಷ್ಟು ಜನ ಭಕ್ತರಿಗೆ ಇವರ ಆಶೀರ್ವಾದ ಸಿಗುವಂತಾಗಲೊ,ಜನರ ಸಂಕಷ್ಟ ಬಗೆಹರೆಸುವ ಶಕ್ತಿ ಮತ್ತಷ್ಟು ಹೆಚ್ಚಾಗಲಿ ಎಂದ ಶುಭಹಾರೈಸಿದರು.

ಇನ್ನು ಕಾರ್ಯಕ್ರಮದಲ್ಲಿ ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೂಕಿನ ಕೋಡಿಹಳ್ಳಿ ಮಠದ ಬೃಂಗೇಶ್ವರ ಸ್ವಾಮೀಜಿ ಸಹ ದಿವ್ಯಸಾನಿಧ್ಯ ವಹಿಸಿದ್ದು,ಕಾರ್ಯಕ್ರಮವ ನ್ನುದ್ದೇಶಿಸಿ ಆಶೀರ್ವಚನ ನೀಡಿದರು, ಇಂದಿನ ಸಮಾಜದಲ್ಲಿ ರಂಜನ ವ್ಯವಸ್ಥೆ ಜೀವಂತವಾಗಿದೆ.ನಿರಾಂಜನನ ದ್ಯಾನವನ್ನು ಜನ ಮರೆಯುತಿದ್ದಾರೆ. ಐಶಾರಾಮ್ಯ,ಆಡಂಬರದ ಡೊಂಬಾಚಾರಕ್ಕೆ ಜನ ಬಲಿಯಾಗುತಿದ್ದಾರೆ.ಇಂತಹ ವೇಳೆ ಬುಡೇನ್ ಸಾಬ್ ಅವರು ಭಕ್ತರ ಸಂಕಷ್ಟ ಪರಿಹಾರ ಮಾಡುತ್ತಿದ್ದಾರೆ.ಕೌಟಂಬಿಕವಾಗಿ ಸಾಕಷ್ಟು ಸ್ಥಿತಿವಂತರಾಗಿದ್ದರು,ಬದುಕನ್ನು ಸರಳತೆಯಿಂದ ಸಾಗಿಸ್ತಿದ್ದಾರೆ.

ಜನಸಾಮಾನ್ಯರಿಗೂ ಇವರು ಪ್ರೇರಣೆ ಯಾಗಿದ್ದಾರೆ.ಇವರ ನಡೆ,ನುಡಿ ಸಹ ಇತರರಿಗೆ ಮಾದರಿ ಎನಿಸಿದೆ.ಇಂತಹ ಸಿದ್ಧಿಪುರುಷರಿಗೆ ಗುರುವಂದನೆ ಸಲ್ಲಿಸ್ತಿರೋದು ನಿಮ್ಮೆಲ್ಲರ ಸುಕೃತ ಎಂದರು.ಈ ವೇಳೆಅಥಿತಿಗಳಾಗಿ ಬಸವಣ್ಣನ ಅನುಯಾಯಿಗಳಾದ ಚಿತ್ರನಾಯಕನಹಳ್ಳಿಯ ಬಾಲರೆಡ್ಡಿಯವರು ಹಾಗು ಸಜ್ಜನಕೆರೆ ಗ್ರಾಮದ ವರ್ತಕರಾದ ರತ್ನಾಕರ್ ಶೆಟ್ಟಿಯವರು ವೇದಿಕೆಯಲ್ಲಿದ್ದರು.

ಕಾರ್ಯಕ್ರಮವನ್ನು ಸೊಂಡೆಕೆರೆಯ ಸಾಹುಕಾರರಾದ ಶಶಿಧರ್,ಕಂಟ್ರಾಕ್ಟರ್ ಗೋವಿಂದರೆಡ್ಡಿ,ಉಪನ್ಯಾಸಕ ವಿಜಯ ಕುಮಾರ್ ಮತ್ತು ಭಕ್ತರಾದ ಕಲ್ಲೇಶ್,ಸಿದ್ದರಾಜು,ನಿಂಗಪ್ಪ,ಜಯ್ಯಣ್ಣ, ಎಂಡಿ ಕೋಟೆ ಕುಮಾರ್ ನಿರ್ವಹಿಸಿದರು.ಈ ವೇಳೆ ಬುಡೇನ್ ಸಾಬ್ ಅವರ ಅನುಯಾಯಿಗಳಾದ ಸಜ್ಜನಕೆರೆ ರಾವಣ್ಣ,ನಿಂಗಜ್ಜ,ಬಸವರಾಜಪ್ಪ,ಚಂದ್ರಪ್ಪ,ರುದ್ರೇಶ್,ಜಗದೀಶ್,ಧನಂಜಯ ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಮಹಿಳೆಯರು ಮತ್ತು ಮಕ್ಕಳು ಭಾಗಿಯಾಗಿದ್ದರು.

# ಕುಡುಕರನ್ನು ಕುಡಿತದಿಂದ ವಿಮುಕ್ತಿಗೊಳಿಸಿ ಉತ್ತಮ ಬದುಕು ಕಟ್ಟಿಕೊಳ್ಳಲು ಮದ್ಯವರ್ಜನ ಶಿಬಿರ ಸಹಕಾರಿ

» **ಚಳ್ಳಕೆರೆ**

ಬಡ ಮತ್ತು ಮದ್ಯಮ ವರ್ಗದ ಕುಟುಂಬಗಳ ಆರ್ಥಿಕ ನಿರ್ವಹಣೆಗೆ ಕಂಟಕಪ್ರಯವಾಗಿರುವ ಮದ್ಯವೆಸನಿಗಳನ್ನು ಕುಡಿತದ ಚಟದಿಂದ ದೂರ ಮಾಡುವ ಮದ್ಯವರ್ಜನ ಶಿಬಿರದ ಕಾರ್ಯ ಪ್ರಶಂಸನೀಯವೆಂದು ಹಿರಿಯ ಪತ್ರಕರ್ತ, ಲೇಖಕ, ಸಾಹಿತಿ ಕೊರ್ಲಕುಂಟೆ ತಿಪ್ಪೇಸ್ವಾಮಿ ತಿಳಿಸಿದರು.

ಅವರು, ನಗರದ ಜೈನಭವನದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಜಿಲ್ಲಾ ಜನಜಾಗೃತಿ ವೇದಿಕೆ, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಟ್ರಸ್ಟ್, ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಪ್ರಗತಿಬಂಧು ಸ್ವಸಹಾಯ ಸಂಘಗಳ ಒಕ್ಕೂಟ ಸಹಯೋಗದೊಂದಿಗೆ ಹಮ್ಮಿಕೊಂಡಿರುವ 1736ನೇ ಮದ್ಯವರ್ಜನ ಶಿಬಿರದ ನಾಲ್ಕನೇ ದಿನದ ಮಾಹಿತಿ ಮಾರ್ಗದರ್ಶನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು.

ರಾಜ್ಯದಲ್ಲಿ ಹಲವಾರು ಜಿಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಪ್ರತಿವರ್ಷವೂ ಈ ಕಾರ್ಯಕ್ರಮ ಆಯೋಜಿಸಿ ಕುಡಿತದ ಚಟಕ್ಕೆ ದಾಸರಾದವರನ್ನು ಕುಡಿತದಿಂದ ವಿಮುಕ್ತಿಗೊಳಿಸಲು ಶ್ರಮಿಸುತ್ತಿರುವುದು ಸಂತಸ ತಂದಿದೆ. ಇದು ಸಮಾಜದಲ್ಲಿ ಉತ್ತಮ ಬೆಳವಣಿಗೆಯಾಗಲು ಸಹಕಾರಿಯಾಗುತ್ತದೆ. ಕುಡಿತದ ಚಟದಿಂದ ಹೊರಬಂದ ವ್ಯಕ್ತಿ ತನ್ನ ಸುಂದರ ಬದುಕನ್ನು ಕಟ್ಟಿಕೊಳ್ಳಲು ಇಂತಹ ಶಿಬಿರಗಳು ನಿರಂತರ ನಡೆಯಬೇಕು ಎಂದರು.



ಜಿಲ್ಲಾ ಜನಜಾಗೃತಿ ವೇದಿಕೆ ನಿರ್ದೇಶಕ ಕೆ.ಎಂ. ಜಗದೀಶ್ ಮಾತನಾಡಿ, ಚಳ್ಳಕೆರೆ ನಗರದಲ್ಲಿ ಸುಮಾರು ಐದಕ್ಕೂ ಹೆಚ್ಚು ಬಾರಿ ಈ ಶಿಬಿರ ಆಯೋಜಿಸಿ ಸಾವಿರಾರು ಜನರನ್ನು ಕುಡಿತದ ಚಟದಿಂದ ದೂರ ಮಾಡಿದ ಕೀರ್ತಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಟ್ರಸ್ಟ್‌ರವರಿಗೆ ಸಲುತ್ತದೆ. ಸಾರ್ವಜನಿಕರು ಸಹ ಕುಡಿತದ ಚಟಕ್ಕೆ ಈಡಾದವರಿಗೆ ಈ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

ವೆಂಕಟಸಾಯಿ ಸೇವಾಟ್ರಸ್ಟ್‌ನ ಸಹ ಕಾರ್ಯದರ್ಶಿ ಹೂವಿನ ಜಗದೀಶ್ ಮಾತನಾಡಿ, ಪ್ರತಿವರ್ಷ ಹಲವಾರು ವಿಭಿನ್ನ ಕಾರ್ಯಕ್ರಮ ನಡೆಸುವ ಮೂಲಕ ಲಕ್ಷಾಂತರ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿರುವ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯ ಹೆಚ್ಚು ಗೌರವ ತರುವಂತಹದ್ದು. ಕಾರಣ ಕುಡಿತಕ್ಕೆ ಒಳಗಾದವರು ಬೇರೆ ಯಾವುದೇ ಮಾತು ಕೇಳಲು ಸಿದ್ದರಿರುವುದಿಲ್ಲ. ಆದರೆ, ಇಂದು ನೂರಾರು ಜನರು ಈ ಶಿಬಿರದಲ್ಲಿ ಭಾಗವಹಿಸಿ ಕುಡಿತ ಬಿಡಲು ಸಂಕಲ್ಪ ಮಾಡಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು.

ವೆಂಕಟಸಾಯಿ ಸೇವಾ ಟ್ರಸ್ಟ್‌ನ ಪ್ರಚಾರ ಸಮಿತಿ ಅಧ್ಯಕ್ಷ, ಪತ್ರಕರ್ತ ಬಿ.ವಿ.ಚಿದಾನಂದಮೂರ್ತಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಯೋಜನಾಧಿಕಾರಿ ಶಶಿಕಲಾಹೆಗ್ಗಡೆ, ಮೇಲ್ವಿಚಾರಕರು ಎಂ.ಜಿ. ಅಶೋಕ್, ಶಿಬಿರಾಧಿಕಾರಿ ದಿವಾಕರ್, ರಂಜಿತಾ, ರುದ್ರಪ್ಪ ಮುಂತಾದವರು ಉಪಸ್ಥಿತರಿದ್ದರು.

### ಮಾದಕ ವಸ್ತು ವಿರುದ್ಧ ಜಾಗೃತಿ ಮೂಡಿಸುವ ಪಠ್ಯ ಅಳವಡಿಸಬೇಕು



» **ಹೊಸದುರ್ಗ**

ಸರ್ಕಾರ ಕುಡಿತದಿಂದ ಆಗುವ ಕೆಡಕಿನ ಬಗ್ಗೆ ಜಾಗೃತಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಮಾಡಬೇಕು, ಶಾಲಾ ಮಟ್ಟದಲ್ಲಿ ವಿದ್ಯಾರ್ಥಿಗಳಿಗೆ ಮದ್ಯಪಾನ ಮತ್ತು ಇತರ ದುಶ್ಚಟಗಳ ವಿರುದ್ಧ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ನಮ್ಮ ಜನಜಾಗೃತಿ ವೇದಿಕೆ ವರ್ಷವಿಡೀ ಕಾರ್ಯಕ್ರಮ ರೂಪಿಸುತ್ತಿದೆ, ಇಂತಹ ಕಾರ್ಯಕ್ರಮಗಳನ್ನು ಶಿಕ್ಷಣ ಇಲಾಖೆಯ ಮುಖಾಂತರವೇ ಆಯೋಜಿಸಲು ಸರ್ಕಾರ ಆದೇಶಿಸಬೇಕು, ಶಾಲಾ ಪಠ್ಯ ಪುಸ್ತಕಗಳಲ್ಲಿ ಮಾದಕ ವಸ್ತುಗಳ ಸೇವನೆಯ ವಿರುದ್ಧ ಜಾಗೃತಿ ಮೂಡಿಸುವ ಪಠ್ಯವನ್ನು ಅಳವಡಿಸಬೇಕು ಎಂದು ಶ್ರೀ ದುರ್ಗಾಂಬಿಕಾ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ, ಸಮಾಜ ಸೇವಕ ಆಗ್ರೋ ಶಿವಣ್ಣ ಸರ್ಕಾರವನ್ನ ಒತ್ತಾಯಿಸಿದರು.

ಸರ್ಕಾರ ನೀಡಲು ಹೊರಟಿರುವ ಹೊಸ ಮಧ್ಯದಂಗಡಿ ಪರವಾನಿಗೆ ಕೊಡಬಾರದೆಂದು ಒತ್ತಾಯಿಸಿ ಹೊಸದುರ್ಗ ಪಟ್ಟಣದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಹಾಗೂ ಜಿಲ್ಲಾ ಜನಜಾಗೃತಿ ವೇದಿಕೆ ಸಂಯುಕ್ತಾಶ್ರಯದಲ್ಲಿ ತಹಶೀಲ್ದಾರ್ ಕಚೇರಿಗೆ ಮನವಿ ಸಲ್ಲಿಸಿ ನಂತರ ಮಾತನಾಡಿದರು.ಸ್ಥಳೀಯ ಜನ ಪುರ ಸಂಘಟನೆಗಳು ಒಕ್ಕೂಟಗಳು ಧಾರ್ಮಿಕ ಕೇಂದ್ರಗಳು ಮತ್ತು ದಲಿತ ಸಂಘಟನೆ ಅವರು ಆಕ್ಷೇಪಿಸುವ ಕಡೆಗಳಲ್ಲಿ ಯಾವುದೇ ಮಧ್ಯದ ಅಂಗಡಿಗೆ ಅವಕಾಶ ನೀಡಬಾರದು ಮಧ್ಯಪಾನ ಶಿಬಿರಗಳಲ್ಲಿ ಪಾನಮುಕ್ತ ಬದುಕು ಕಟ್ಟಿಕೊಂಡವರಿಗೆ ಸರ್ಕಾರ ವಿಶೇಷ ಸೌಲಭ್ಯ ಅಥವಾ ಪ್ಯಾಕೇಜ್ ನೀಡುವ ಬಗ್ಗೆ ಚಿಂತಿಸಬೇಕು ಎಂದರು

## ಪ್ರಮುಖ ಸುದ್ದಿ

# ಕಬಡ್ಡಿ: ಭಾರತ ವಿರುದ್ಧ ಪಾಕ್‌ಗೆ ಹೀನಾಯ ಸೋಲು

» **ಹ್ಯಾಂಗ್ಝೌ**

ಏಷ್ಯನ್ ಗೇಮ್ಸ್ ನಲ್ಲಿ (Asian Games) ಈಗಾಗಲೇ ಹಾಕಿ, ವಾಲಿಬಾಲ್ ಮತ್ತು ಸ್ಕ್ವಾಷ್ ನಲ್ಲಿ ಭಾರತ-ಪಾಕಿಸ್ತಾನ ಕೆಲವು ಸ್ಮರಣೀಯ ಮುಖಾಮುಖಿಗಳನ್ನು ಕಂಡಿದೆ. ಎಲ್ಲದರಲ್ಲೂ ಭಾರತ ಮೇಲುಗೈ ಸಾಧಿಸಿದೆ. ಪಾಕಿಸ್ತಾನ ತಂಡವನ್ನು ನಿರಾಯಸವಾಗಿ ಸೋಲಿಸಿ ಭಾರತೀಯ ಕ್ರೀಡಾಪ್ರೇಮಿಗಳಿಗೆ ಖುಷಿ ಕೊಟ್ಟಿದ್ದಾರೆ.

ಇದೀಗ ಕಬಡ್ಡಿ ತಂಡವೂ ಅದೇ ಹಾದಿಯಲ್ಲಿ ಪಾಕಿಸ್ತಾನ ತಂಡದ ವಿರುದ್ಧ ಸೆಮಿಫೈನಲ್ ಪಂದ್ಯದಲ್ಲಿ ಅಮೋಘ ವಿಜಯ ಸಾಧಿಸಿದೆ. ಎಲ್ಲ ವಿಭಾಗದಲ್ಲೂ ಅಧಿಕಾರಯುತ ಪ್ರದರ್ಶನ ನೀಡಿದ ಭಾರತ ತಂಡ 60-13 ಅಂಕಗಳ ಬೃಹತ್ ಅಂತರದ ವಿಜಯ ಸಾಧಿಸಿದೆ.

ಈ ಗೆಲುವಿನೊಂದಿಗೆ ಭಾರತ ತಂಡ ಏಷ್ಯನ್ ಗೇಮ್ಸ್‌ನ ಫೈನಲ್‌ಗೇರಿದೆ. ಅಲ್ಲದೆ, ಕನಿಷ್ಠ ಪಕ್ಷ ಬೆಳ್ಳಿಯ ಪದಕವೊಂದನ್ನು ಖಚಿತಪಡಿಸಿಕೊಂಡಿದೆ. ಭಾರತ ತಂಡವು ಎಂಟನೇ ಬಾರಿ ಏಷ್ಯನ್ ಗೇಮ್ಸ್ ನ ಫೈನಲ್‌ಗೇರಿದ ಸಾಧನೆಯನ್ನೂ ಇದೇ ವೇಳೆ ಮಾಡಿದೆ. 2018ರಲ್ಲಿ ಜಕಾರ್ತದಲ್ಲಿ ನಡೆದಿದ್ದ ಏಷ್ಯನ್ ಗೇಮ್ಸ್‌ನಲ್ಲಿ ಭಾರತ ತಂಡ ಉತ್ತಮ ಪ್ರದರ್ಶನ ನೀಡಲು ವಿಫಲಗೊಂಡಿತು. ಹೀಗಾಗಿ ಕಂಚಿನ ಪದಕವನ್ನು ಗೆದ್ದುಕೊಂಡಿತ್ತು. ಆದರೆ ಈ ಬಾರಿ ಸ್ಮರಣೀಯ ಪ್ರದರ್ಶನ ನೀಡಿ ಫೈನಲ್‌ಗೇರಿದೆ. ಇರಾನ್ ಚೈನಿಸ್ ತೈಪೆ ನಡುವಿನ ಇನ್ನೊಂದು ಸೆಮಿಫೈನಲ್ ಪಂದ್ಯದ ವಿಜೇತರ ನಡುವೆ ಸ್ವರ್ಣ ಪದಕಕ್ಕಾಗಿ ಭಾರತ ಸೆಣಸಾಡಲಿದೆ.




ಪಂದ್ಯದ ಆರಂಭದಲ್ಲಿ ಪಾಕಿಸ್ತಾನ ತಂಡ 4-0 ಲೀಡ್ ಪಡೆದುಕೊಂಡು ವಿಶ್ವಾಸದಿಂದ ಮುನ್ನಡೆದಿತ್ತು. ಆದರೆ, ಭಾರತ ತಂಡ ತನ್ನ ತಂತ್ರಗಳನ್ನು ಬಳಸಿ ಪಾಕಿಸ್ತಾನ ಕೋರ್ಟ್ ಖಾಲಿ ಮಾಡಲು ಶುರು ಮಾಡಿತು. ಆ ಬಳಿಕ ಶುರು ಮಾಡಿದ ದಾಳಿಯನ್ನು ಕೊನೇ ತನಕ ನಿಲ್ಲಿಸದೇ ಗೆಲುವು ಸಾಧಿಸಿತು.

ಪ್ರಥಮಾರ್ಧ ಮುಕ್ತಾಯದ ವೇಳೆಗೆ ಭಾರತ ತಂಡ 35-5 ಅಂಕಗಳ ಬೃಹತ್ ಮುನ್ನಡೆ ಪಡೆದುಕೊಂಡಿತ್ತು. ಈ ವೇಳೆಗಾಗಲೇ ಭಾರತದ ಗೆಲುವು ನಿಶ್ಚಯಗೊಂಡಿತ್ತು. ದ್ವಿತೀಯಾರ್ಧದಲ್ಲಿ ಮತ್ತಷ್ಟು ಜಿದ್ದಿನಿಂದ ಆಡಿದ ಭಾರತ ತಂಡ ಮತ್ತೆ 25 ಅಂಕಗಳನ್ನು ಪಡೆದುಕೊಂಡಿದೆ. ಅಲ್ಲದೇ ದ್ವಿತೀಯಾರ್ಧದಲ್ಲಿ ಎದುರಾಳಿ ತಂಡಕ್ಕೆ ಕೇವಲ 8 ಅಂಕಗಳನ್ನು ಮಾತ್ರ ಬಿಟ್ಟುಕೊಟ್ಟಿತು.

**ಮಹಿಳೆಯರ ತಂಡವೂ ಫೈನಲ್‌ಗೆ:** ಸೆಮಿಫೈನಲ್ ಪಂದ್ಯದಲ್ಲಿ ನೇಪಾಳವನ್ನು 61-17 ಅಂಕಗಳಿಂದ ಮಣಿಸಿದ ಭಾರತ ಮಹಿಳಾ ಕಬಡ್ಡಿ ತಂಡ ಫೈನಲ್ ಪ್ರವೇಶಿಸಿದೆ.. ರಿಕರ್ವ್ ಬಿಲ್ಲುಗಾರಿಕೆ ತಂಡಗಳು ಸೆಮಿಫೈನಲ್ ಪಂದ್ಯಗಳಲ್ಲಿ ಬಾಂಗ್ಲಾದೇಶವನ್ನು ಗೌರವಯುತವಾಗಿ ಸೋಲಿಸಿದ ಭಾರತ ಕನಿಷ್ಠ ಬೆಳ್ಳಿ ಪದಕವನ್ನು ಖಚಿತಪಡಿಸಿದೆ. ಪುರುಷರ ಫ್ರೀಸ್ಟೈಲ್ 65 ಕೆಜಿ ವಿಭಾಗದಲ್ಲಿ ಹಿರಿಯ ಕುಸ್ತಿಪಟು ಬಜರಂಗ್ ಪೂನಿಯಾ ಸೆಮಿಫೈನಲ್ ಪಂದ್ಯದಲ್ಲಿ ಸೋತು ಕಂಚಿನ ಪದಕಕ್ಕಾಗಿ ಹೋರಾಡಲಿದ್ದಾರೆ. ಬಿಲ್ಲುಗಾರಿಕೆಯಲ್ಲಿ

ಮಹಿಳಾ ರಿಕರ್ವ್ ತಂಡವು ಕಂಚಿನ ಪದಕಕ್ಕಾಗಿ ನಡೆದ ಪಂದ್ಯದಲ್ಲಿ ವಿಯೆಟ್ನಾಂ ತಂಡವನ್ನು ಸೋಲಿಸಿತು. ಋತುರಾಜ್ ಗಾಯಕ್ವಾಡ್ ನೇತೃತ್ವದ ಪುರುಷರ ಕ್ರಿಕೆಟ್ ತಂಡವು ಏಷ್ಯನ್ ಕ್ರೀಡಾಕೂಟದ ಫೈನಲ್ಗೆ ಪ್ರವೇಶಿಸಿತು, ರಾಷ್ಟ್ರಕ್ಕೆ ಕನಿಷ್ಠ ಬೆಳ್ಳಿ ಪದಕವನ್ನು ಖಚಿತಪಡಿಸಿತು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T